ಸಂಪುಟ : ೯ ಸಂಚಿಕೆ ೮೪ ಪುಟ : ೪ ಬೆಲೆ: ೩.೦೦ ಶುಕ್ರವಾರ ಮೇ ೩ ೨೦೨೪ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 84 Pages : 4 Price : 3.00 Friday May 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗಜೇಂದ್ರಗಡದಲ್ಲಿ ನಡೆದ ಬಿಜೆಪಿ ಬೃಹತ್ ಪ್ರಚಾರ ಸಮಾವೇಶದಲ್ಲಿ ಬಸವರಾಜ ಬೊಮ್ಮಾಯಿ

## ಯಡಿಯೂರಪ್ಪ ನಿಜವಾದ ರೈತ ನಾಯಕ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರೈತರ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ಮೋಸ ಮಾಡಿದೆ. ರಾಜ್ಯದಲ್ಲಿ ಇಷ್ಟು ದೊಡ್ಡ ಬರ ಇದ್ದರೂ ರಾಜ್ಯ ಸರ್ಕಾರ ಒಂದು ಪೈಸೆ ತನ್ನ ಖಜಾನೆಯಿಂದ ಕೊಟ್ಟಿಲ್ಲ. ಕೇಂದ್ರ ಸರ್ಕಾರ 3500 ಕೋಟಿ ರೂ. ಕೊಟ್ಟಿದೆ. ಇವರು ಅದಕ್ಕೆ ಸಮನಾದ ಹಣ ಸೇರಿಸಿ ಕೊಡುವಂತೆ ಕೇಳಿದರೂ ಕೊಡುತ್ತಿಲ್ಲ. ಇಂತಹ ರೈತ ವಿರೋಧಿ ಸರ್ಕಾರ ಇರಬೇಕಾ ಎಂದು ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದರು.

ಗಜೇಂದ್ರಗಡದಲ್ಲಿ ಬಿಜೆಪಿ ಏರ್ಪಡಿಸಿದ್ದ ಬೃಹತ್ ಪ್ರಚಾರ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಿಜವಾದ ರೈತ ನಾಯಕ ಯಡಿಯೂರಪ್ಪ. 2008ರಲ್ಲಿ ಎಲ್ಲ ರೈತರಿಗೂ 10 ಎಚ್‌ಪಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಆದೇಶ




ಯಡಿಯೂರಪ್ಪ ಅವರ ಅವಧಿಯಲ್ಲಿ ಸಿಂಗಟಾಲೂರು ಯೋಜನೆ ಜಾರಿಗೊಳಿಸಿ ನೀರು ತಂದಿದ್ದಾರೆ. ಕಾಂಗ್ರೆಸ್‌ನವರು ಕೃಷ್ಣಾ ಮೇಲ್ದಂಡೆ ಎರಡನೇ ಹಂತ ಅಸಾಧ್ಯ ಎಂದರು. ನಾವು ಮಾಡಿದ ಮೇಲೆ ಕಾಂಗ್ರೆಸ್‌ನವರು ಅಡಿಗಲ್ಲು ಹಾಕುವ ಕೆಲಸ ಮಾಡಿದರು. ನಾವು ರೋಣ, ನರೇಗಲ್‌ಗೆ ನೀರು ತರುವ ಯೋಜನೆ ಮಾಡಿದ್ದೇವೆ. ಕಳಕಪ್ಪ ಬಂಡಿಯವರು ಕೆರೆ ತುಂಬಿಸುವ ಯೊಜನೆ ತಂದರೆ, ಈಗಿನ ಕಾಂಗ್ರೆಸ್ ಸರ್ಕಾರ ಅದನ್ನು ನಿಲ್ಲಿಸಿದೆ ಎಂದು ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಮಾಡಿದರು. ಹೈನುಗಾರರಿಗೆ ಪ್ರೋತ್ಸಾಹ ಧನ ನೀಡಿದರು. ಖಾಸಗಿ ವಲಯದಲ್ಲಿದ್ದ ರಸಗೊಬ್ಬರವನ್ನು ಸೊಸೈಟಿ ಮೂಲಕ ಕೊಡುವ ವ್ಯವಸ್ಥೆ ಜಾರಿ ಮಾಡಿದರು.

ಪ್ರಧಾನಿ ನರೇಂದ್ರ ಮೋದಿಯವರು ನಮ್ಮ ದೇಶವನ್ನು ಒಗ್ಗೂಡಿಸುವ ಕೆಲಸ ಮಾಡಿದ್ದಾರೆ. ಭಯೋತ್ಪಾದಕರನ್ನು ಅವರ ನೆಲದಲ್ಲೇ ಹೋಗಿ ಧ್ವಂಸ ಮಾಡಿ, ಭಯೊತ್ಪಾದಕರಿಗೆ ಭಯ ಹುಟ್ಟುವಂತೆ ಮಾಡಿದರು. ಕೋವಿಡ್ ಸಂದರ್ಭದಲ್ಲಿ ಎಲ್ಲರಿಗೂ ಲಸಿಕೆ ಕೊಟ್ಟು ಜೀವ ಉಳಿಸಿದರು. ಉಜ್ವಲ ಗ್ಯಾಸ್ ಕೊಟ್ಟು, ಐದು ಕೆಜಿ ಉಚಿತ ಅಕ್ಕಿ ಕೊಟ್ಟಿರುವುದು ಮೋದಿಯವರು. ಅದನ್ನು ಕಾಂಗ್ರೆಸ್ ತನ್ನ ಭಾಗ್ಯ ಎಂದು ಹೇಳಿಕೊಳ್ಳುತ್ತಿದೆ. ಮೋದಿಯವರ ಋಣ ತೀರಿಸಲು ಬಿಜೆಪಿಗೆ ಮತದಾನ ಮಾಡುವ ಮೂಲಕ ಮೋದಿಯವರನ್ನು ಗೆಲ್ಲಿಸಿ. ಹಾವೇರಿ–ಗದಗ ಕ್ಷೇತ್ರದಿಂದ ನನ್ನನ್ನು ಆರಿಸಿ ಕಳಿಸಿದರೆ ಸಂಸತ್ತಿನಲ್ಲಿ ನಿಮ್ಮ ಪರವಾಗಿ ನಿಲ್ಲುತ್ತೇನೆ ಎಂದರು.

ಸಮಾವೇಶದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಮಾಜಿ ಸಚಿವ ಕಳಕಪ್ಪ ಬಂಡಿ ಸೇರಿದಂತೆ ಅನೇಕ ಮುಖಂಡರು ಪಾಲ್ಗೊಂಡಿದ್ದರು.

### ಪ್ರಿಯಾಂಕಾ ಗಾಂಧಿ ನೇತೃತ್ವದಲ್ಲಿ ಬಹಿರಂಗ ಸಮಾವೇಶ ನಾಳೆ: ಸಚಿವ ಎಚ್.ಕೆ.ಪಾಟೀಲ

## ಸಮಾವೇಶವನ್ನು ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಅವರು ಮೇ 4ರಂದು ಸಂಜೆ 4ಕ್ಕೆ ನಗರಕ್ಕೆ ಆಗಮಿಸುತ್ತಿದ್ದು, ಎಲ್ಲರೂ ಸಮಾವೇಶವನ್ನು ಯಶಸ್ವಿಗೊಳಿಸಬೇಕಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕಾಟನ್ ಸೇಲ್ ಸೊಸೈಟಿಯ ಸಭಾಭವನದಲ್ಲಿ ಮೇ 4ರಂದು ಪ್ರಿಯಾಂಕಾ ಗಾಂಧಿ ಅವರು ಪಾಲ್ಗೊಳ್ಳಲಿರುವ ಸಮಾವೇಶದ ಕುರಿತು ಗುರುವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ



ಕಳೆದ ವಿಧಾನಸಭಾ ಚುನಾವಣೆಯಲ್ಲಿ ನಗರದಲ್ಲಿ ಹಮ್ಮಿಕೊಂಡಿದ್ದ ಪ್ರಜಾಧ್ವನಿ ಕಾರ್ಯಕ್ರಮವೂ ರಾಜ್ಯದ ಅತ್ಯಂತ ಯಶಸ್ವಿ ಕಾರ್ಯಕ್ರಮಗಳಲ್ಲಿ ಒಂದಾಗಿರುವುದನ್ನು ನೆನಪಿಸಿಕೊಳ್ಳಬೇಕಾಗಿದೆ. ಆದ್ದರಿಂದ ನಾವು ಈ ಕಾರ್ಯಕ್ರಮವನ್ನು ಅಭೂತಪೂರ್ವವಾಗಿ ಮಾಡುತ್ತಿದ್ದು, ಅತ್ಯಂತ ಗಂಭೀರವಾಗಿ ತೆಗೆದುಕೊಂಡು ಸಮಾವೇಶದಲ್ಲಿ ಸೇರುವ ಜನರನ್ನು ನೋಡಿ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲುವು ನಿಶ್ಚಿತ ಎಂಬುದಾಗಿ ಸಂದೇಶ ಹೋಗಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸೇರಿದಂತೆ ರಾಜ್ಯದ ಸಚಿವರು, ಕೇಂದ್ರದ ಹಾಗೂ ರಾಜ್ಯದ ನಾಯಕರು ಆಗಮಿಸಲಿದ್ದಾರೆ. ಕಳೆದ ನವೆಂಬರ್ ತಿಂಗಳಲ್ಲಿ ಆಚರಿಸಿದ ಕನ್ನಡ ಸಂಭ್ರಮ ಹಬ್ಬವನ್ನು ರಾಜ್ಯದ ಜನರು ತಿಂಗಳವರೆಗೂ ಮಾತನಾಡುತ್ತಿದ್ದರು. ನಮ್ಮ ಸಂಘಟನೆಯ ಕಾರ್ಯಗಳನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಅವರು ಮೆಚ್ಚಿ ಸಂಭ್ರಮಿಸಿದರಲ್ಲದೇ, ಸಂತೋಷ ವ್ಯಕ್ತಪಡಿಸಿದ್ದರು ಎಂದು ತಿಳಿಸಿದರು.

▶▶3ನೇ ಪುಟಕ್ಕೆ

## ನರೇಗಾ ಕಾಮಗಾರಿ ಸ್ಥಳಕ್ಕೆ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ ಎಸ್ ಅವರು ಅಡವಿಸೋಮಾಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮನರೇಗಾ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ನರೇಗಾ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು ರೈತರಿಗೆ ಮತ್ತು ಬಡವರಿಗೆ ಅನುಕೂಲವಾಗಿದೆ. ಎಲ್ಲರೂ ಇದರ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಗಂಡು–ಹೆಣ್ಣಿಗೆ ಸಮಾನ ಕೆಲಸಕ್ಕೆ ಸಮಾನ ಕೂಲಿ ನೀಡಲಾಗುವದು.

ಪ್ರತಿ ಕುಟುಂಬಕ್ಕೆ ಒಂದು ವರ್ಷದಲ್ಲಿ 100 ದಿನಗಳ ಉದ್ಯೋಗ ನೀಡಲಾಗುತ್ತಿದೆ. ಗ್ರಾಮೀಣ ಭಾಗದ ಜನರು ಉದ್ಯೋಗ ಅರಸಿ ಬೇರೆ ರಾಜ್ಯ, ಜಿಲ್ಲೆ ಹಾಗೂ ನಗರಗಳಿಗೆ ವಲಸೆ ಹೋಗುವುದನ್ನು ತಡೆಗಟ್ಟುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಎಲ್ಲರೂ ತಮ್ಮ ಸ್ವಂತ ಊರಿನಲ್ಲಿಯೇ ಇದ್ದು ಉದ್ಯೋಗ ಮಾಡಿ ಕೂಲಿ ಪಡೆಯಬಹುದು ಎಂದು ಸಲಹೆ ನೀಡಿದರು.

ಈ ವೇಳೆ ಗದಗ ತಾ.ಪಂ ಸಹಾಯಕ ನಿರ್ದೇಶಕ (ಗ್ರಾ.ಉ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ನರೇಗಾ ಸಿಬ್ಬಂದಿಗಳು ಹಾಜರಿದ್ದರು.

### ಮತದಾನ ಜಾಗೃತಿಗಾಗಿ ಬೈಕ್ ರ‍್ಯಾಲಿ | ತಾ.ಪಂ ಇಓ ಎಸ್.ಕೆ. ಇನಾಮದಾರರಿಂದ ಚಾಲನೆ

## ಮತದಾನದಿಂದ ಯಾರೂ ವಂಚಿತರಾಗದಿರಿ

■ವಿಜಯಸಾಕ್ಷಿ ಸುದ್ದಿ, ರೋಣ

ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ನಿಮ್ಮ ಹಕ್ಕು ಚಲಾಯಿಸಿ. ಚುನಾವಣಾ ಆಯೋಗ ನೀಡಿರುವ ವೋಟರ್ ಹೆಲ್ಪ್‌ಲೈನ್, ಸಕ್ಷಾಮ್ ಆ್ಯಪ್, ಸಿವಿಜಿಲ್ ಆ್ಯಪ್‌ಗಳನ್ನು ಬಳಸಿ ನೈತಿಕ ಮತದಾನಕ್ಕೆ ಸಹಕರಿಸಿ ಹಾಗೂ ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದ ದೂರುಗಳನ್ನು ನೀಡಬಹುದಾಗಿದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.

ಲೋಕಸಭಾ ಚುನಾವಣೆ 2024ರ ಅಂಗವಾಗಿ ಗುರುವಾರ ರೋಣ ಪಟ್ಟಣದ ತಾಲೂಕು ಪಂಚಾಯಿತಿಯಿಂದ ಸಿದ್ದಾರೂಡ ಮಠದವರೆಗೆ ಹಾಗೂ ತಾಲೂಕಾ ಬಸ್ ನಿಲ್ದಾಣದಲ್ಲಿ ಮತದಾನ ಜಾಗೃತಿಗಾಗಿ ನಡೆದ ಬೈಕ್ ರ‍್ಯಾಲಿ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಮುಂಭಾಗದಲ್ಲಿ ಸೆಲ್ಫಿ ಸ್ಟ್ಯಾಂಡ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೇ 7ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಯಾವುದೇ ಆಮಿಷಕ್ಕೆ



ಒಳಗಾಗದೇ ವಿವೇಚನೆಯಿಂದ ಅರ್ಹರೆಲ್ಲರೂ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಕಡ್ಡಾಯವಾಗಿ ಮತದಾನ ಮಾಡಿ ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು ಹಾಗೂ ಹೆಸ್ಕಾಂ ಸಿಬ್ಬಂದಿಗಳು ಭಾಗವಹಿಸಿದ್ದರು. ರೋಣ ತಾಲೂಕಿನ ಹೆಸ್ಕಾಂ ಸಿಬ್ಬಂದಿಗಳು ಸೇರಿದಂತೆ ತಾಲೂಕಿನ ವಿವಿಧ ಮಟ್ಟದ ಅಧಿಕಾರಿಗಳು ಬೈಕ್ ರ‍್ಯಾಲಿ ಮುಖಾಂತರ ಮತದಾನ ಜಾಗೃತಿ ಕುರಿತು 'ಕಡ್ಡಾಯವಾಗಿ ಮತದಾನ ಮಾಡಿ' ಇತ್ಯಾದಿ ನಾಮಫಲಕಗಳನ್ನು ಹಿಡಿದು ಮತದಾನ ಜಾಗೃತಿ ಹಾಗೂ ಮತದಾನದ ಬಗ್ಗೆ ಅರಿವು ಮೂಡಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

**ಆಕರ್ಷಣೆಯಾದ ಸೆಲ್ಫಿ ಪಾಯಿಂಟ್**

ರೋಣ ಪಟ್ಟಣದ ಬಸ್ ನಿಲ್ದಾಣದಲ್ಲಿ ಹಾಗೂ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಅಳವಡಿಸಿದ ಸೆಲ್ಫಿ ಪಾಯಿಂಟ್‌ಗೆ ಯುವ ಮತದಾರರ, ಮೊದಲ ಬಾರಿ ಮತದಾನ ಮಾಡುತ್ತಿರುವ ವಿದ್ಯಾರ್ಥಿಗಳ ಹಾಗೂ ಮಹಿಳೆಯರ ಗಮನ ಸೆಳೆಯತ್ತಿದೆ. ಭೇಟಿ ನೀಡಿದ ಹೆಚ್ಚಿನ ಮತದಾರರು ಈ ಸ್ಥಳದಲ್ಲಿ ತಮ್ಮ ಮೊಬೈಲ್ ಕ್ಯಾಮರಾ ಮೂಲಕ ಸೆಲ್ಫಿ ತೆಗೆದುಕೊಂಡಿದ್ದು ವಿಶೇಷವಾಗಿತ್ತು.

### ಕಡ್ಡಾಯ ಮತದಾನ ಜಾಗೃತಿ ಮೂಡಿಸುವ ವಿಶಿಷ್ಟ ಕಾರ್ಯಕ್ರಮ

## ಮದರಂಗಿಯಲ್ಲಿ ಮತದಾನ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ರೋಣ

ಅಬ್ಬಿಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆಲಸ ಮಾಡುವ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು, ಎನ್‌ಆರ್‌ಎಲ್‌ಎಂ ಮಹಿಳಾ ಸಂಘಟನೆಗಳ ಸದಸ್ಯರು, ಅಂಗನವಾಡಿ ಕಾರ್ಯಕರ್ತರು ಗ್ರಾಮದ ಪ್ರತಿ ಮನೆ ಮನೆಗೆ ಭೇಟಿ ನೀಡಿ ಮನೆಯಲ್ಲಿನ ಮಹಿಳೆಯರ ಕೈಯಲ್ಲಿ ಮತದಾನ ಜಾಗೃತಿ ಮೂಡಿಸುವ ಮೆಹಂದಿಯನ್ನು ಬಿಡಿಸುವ ಮೂಲಕ ಸಾರ್ವಜನಿಕರಲ್ಲಿ ಕಡ್ಡಾಯ ಮತದಾನ ಜಾಗೃತಿಯನ್ನು ಮೂಡಿಸುವ ಮೂಲಕ ವಿಶಿಷ್ಟ ಕಾರ್ಯಕ್ರಮ ಜರುಗಿತು.

ಗ್ರಾ.ಪಂಗಳಲ್ಲಿ 50ಕ್ಕೂ ಹೆಚ್ಚು ಮಹಿಳೆಯರು ಒಟ್ಟುಗೂಡಿ ಗ್ರಾಮದ ಪ್ರತಿ ಮನೆ ಮನೆಗೆ ಭೇಟಿ ನೀಡಿ ವಿವಿಧ ಘೋಷಣೆಗಳ ಬರಹ, ಜಾಗೃತಿ ಮೂಡಿಸುವ ಅಲಂಕಾರಿಕ ಚಿತ್ರಗಳು ಮತ್ತು ಮೆಹಂದಿಯಲ್ಲಿ ವಿವಿಧ ಡಿಸೈನ್‌ಗಳನ್ನು ಗ್ರಾಮದ ಮಹಿಳೆಯರ ಕೈಯಲ್ಲಿ ಬಿಡಿಸುವ




ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮದಲ್ಲೂ ವಿಭಿನ್ನವಾಗಿ ಜಾಗೃತಿ ಮೂಡಿಸುವ ಕೆಲಸವನ್ನು ಮಹಿಳಾ ಸಂಘಟನೆಗಳು ಮಾಡುತ್ತಿವೆ. ಇಂದು ಅಬ್ಬಿಗೇರಿ ಹೋಬಳಿ ಮಟ್ಟದಲ್ಲಿ ಮೆಹಂದಿ ಮೂಲಕ ಮತದಾನ ಜಾಗೃತಿ ಬಗ್ಗೆ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸಿದ ಕಾರ್ಯ ಮಹಿಳಾ ಸಂಘಟನೆಗಳ ಹಾಗೂ ಎಲ್ಲಾ ಸದಸ್ಯರಿಗೂ ಖುಷಿ ತಂದಿದೆ ಎಂದು ಲೋಹಿತ ಎಂ ಅಭಿಪ್ರಾಯಪಟ್ಟರು.

ಮೂಲಕ ಮೇ–7ರಂದು ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿಸಿದರು.

ಮೇ 7ರಂದು ಮತದಾನ ಮಾಡು, ಚುನಾವಣಾ ಪರ್ವ ದೇಶದ ಗರ್ವ, ನನ್ನ ಮತ ನನ್ನ ಹಕ್ಕು, ನಿಮ್ಮ ಮತ ದೇಶಕ್ಕೆ ಹಿತ, ಕಡ್ಡಾಯವಾಗಿ ಮತದಾನ ಮಾಡಿ ಮತ್ತು ಮತದಾನ ನಮ್ಮ ಹಕ್ಕು ಎಂಬ ಘೋಷಣೆಗಳ ಬರಹಗಳನ್ನು ಮೆಹಂದಿ ಮೂಲಕ ಗ್ರಾಮದ ಮಹಿಳೆಯರಿಗೆ ಹಾಗೂ ತಮ್ಮ ಕೈಯಲ್ಲಿ ಬಿಡಿಸಿಕೊಂಡರು. ಮತದಾನ ಜಾಗೃತಿ ಕುರಿತಾದ ಚಿತ್ರಗಳನ್ನು ಕೈಯಲ್ಲಿ ಬಿಡಿಸಿಕೊಂಡು ಮತದಾನ ಜಾಗೃತಿ ಸಾರಿದರು. ಸಾರ್ವಜನಿಕರು ಕೂಡಾ ಮಹಿಳೆಯರು ಕೈಯಲ್ಲಿ ಬಿಡಿಸಿಕೊಂಡ ಮತದಾನದ ಚಿತ್ರಗಳನ್ನು ನೋಡಿ ಸಂತಸಪಟ್ಟರು.

ಗ್ರಾಮದ ಮಹಿಳೆಯರಿಗಾಗಿ ಹಮ್ಮಿಕೊಂಡ ಮೆಹಂದಿ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಹಿತ ಎಂ ಮಾತನಾಡಿ, ಮೆಹಂದಿ ಕೈಯಲ್ಲಿ ಬಿಡಿಸಿಕೊಳ್ಳುವುದು ಮಹಿಳೆಯರಿಗೆ ಇಷ್ಟವಾದ ಕೆಲಸ. ಮತದಾನ ಜಾಗೃತಿ ಕುರಿತು ಮಹಿಳೆಯರು ವಿವಿಧ ಬರಹಗಳನ್ನು ಕೈಯಲ್ಲಿ ಬಿಡಿಸಿಕೊಂಡು ಜಾಗೃತಿ ಮೂಡಿಸುವ ಕಾರಣದಿಂದ ಪ್ರತಿ ಮನೆಗೂ ಮತದಾನ ಜಾಗೃತಿ ಮೂಡಿಸಿದಂತಾಗುತ್ತದೆ ಎಂದರು.

ಈ ಕಾರ್ಯಕ್ರಮದಲ್ಲಿ ಗ್ರಾಮ ಕಾಯಕ ಮಿತ್ರ, ಕಾಯಕ ಬಂಧುಗಳು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಸಂಜೀವಿನಿ ಒಕ್ಕೂಟದ ಸದಸ್ಯರು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಸೇವಾ ನಿವೃತ್ತಿ ಹೊಂದಿದ ಡಾ. ಮೃತ್ಯುಂಜಯರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಡಾ. ಪುಟ್ಟರಾಜ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿ ಹಾಗೂ ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಮೃತ್ಯುಂಜಯ ಶೆಟ್ಟರ ಇತ್ತೀಚೆಗೆ ಸೇವಾ ನಿವೃತ್ತಿ ಹೊಂದಿದ ಪ್ರಯುಕ್ತ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಡಾ. ಎಂ.ಜಿ. ಶೆಟ್ಟರರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಮಹಾವಿದ್ಯಾಲಯದ ಖಯಾಲ ಸಹ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವ ಮತ್ತು ಸೇವಾ ಜ್ಯೇಷ್ಠತೆ ಹೊಂದಿರುವ ಡಾ. ಸುಮಿತ್ರಾ ಹಿರೇಮಠ ಅವರಿಗೆ ಮಹಾವಿದ್ಯಾಲಯದ ಪ್ರಾಚಾರ್ಯರೆಂದು ಅಧಿಕಾರವನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಮಾಹಾವಿದ್ಯಾಲಯದ ಸ್ಥಾಯಿ ಸಮಿತಿಯ ಅಧ್ಯಕ್ಷ, ನಿರ್ದೇಶಕರಾದ ಎಸ್.ಎಂ. ಗೌಡರ, ನಿರ್ದೇಶಕರಾದ ಎಸ್.ಆರ್. ಇಟಗಿ, ಆಪ್ತ ಕಾರ್ಯದರ್ಶಿ ಬಸವರಾಜ ಚಕ್ರಣ್ಣವರ ಹಾಗೂ ಮಹಾವಿದ್ಯಾಲದ ಶಿಕ್ಷಕರು, ಶಿಕ್ಷಕೇತರ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಸ್ಥಾಪಿಸಿದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರ ಒಂದು ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು 24–04–2024ರ ಒಳಗಾಗಿ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರ ನಿರ್ದೇಶನದ ಮೇರೆಗೆ ಅರ್ಜಿ ಸಲ್ಲಿಸುವ ಅವಧಿಯನ್ನು ಪುನಃ 13–05–2024ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ವಕೀಲರು ಅರ್ಜಿ ಸಲ್ಲಿಸಲು ಮತ್ತು ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್: http://gadag.dcourts.gov.in ಮೂಲಕ ಅಥವಾ ಗದಗ ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾಥಾ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಮಲೇರಿಯಾ ದಿನ ಪ್ರಯುಕ್ತ ಮೇ 3ರಂದು ಬೆಳಿಗ್ಗೆ 8 ಗಂಟೆಗೆ ದಂಡಪ್ಪ ಮಾನ್ವಿ (ಎಮ್.ಸಿ.ಎಚ್ ಆಸ್ಪತ್ರೆ) ಕೆ.ಸಿ. ರಾಣಿ ರಸ್ತೆ, ಗದಗ ಕಾರ್ಯಾಲಯದಿಂದ ಸಾರ್ವಜನಿಕರಿಗೆ ಕೀಟಜನ್ಯ ರೋಗಗಳ ಅರಿವು ಮೂಡಿಸಲು ಜಿಲ್ಲಾ ಮಟ್ಟದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಪಾದಕೀಯ

# ಆತ್ಮಸಾಕ್ಷಿ ಇದ್ದರೆ ಕ್ಷಮೆ ಕೇಳಿ

ಮಾಜಿ ಪ್ರಧಾನಿ ದೇವೇಗೌಡರ ಕುಟುಂಬ ಇವತ್ತು ಸಾಕಷ್ಟು ಚರ್ಚೆಯಲ್ಲಿದೆ. ಸಂಸದ ಪ್ರಜ್ವಲ್ ಅವರು ನಡೆಸಿದ್ದಾರೆ ಎನ್ನಲಾದ ಅಶ್ಲೀಲ ವಿಡಿಯೋಗಳ ಹಗರಣ ಇವತ್ತು ದೇಶಾದ್ಯಂತ ಸದ್ದು ಮಾಡುತ್ತಿದೆ.

ಆರಂಭದಲ್ಲಿ ಇದೊಂದು ಕುತಂತ್ರ, ಪ್ರತಿಪಕ್ಷಗಳು ನಮ್ಮ ಕುಟುಂಬದ ಗೌರವ ಘನತೆಯನ್ನು ಹಾಳುಮಾಡಲು ಯತ್ನಿಸುತ್ತಿದ್ದಾರೆ ಎಂದು ಆರೋಪ ಮಾಡುತ್ತಿದ್ದ ದೇವೇಗೌಡರ ಕುಟುಂಬದ ಕುಡಿಗಳು, ಇವತ್ತು ಪ್ರಜ್ವಲ್ ರೇವಣ್ಣ ಅವರಿಂದಾಗಿ ನಮ್ಮ ಪರಿವಾರ ಮಾನಹಾನಿ ಎದುರಿಸಬೇಕಾಗಿದೆ ಎನ್ನುವ ಬಗ್ಗೆ ಚಿಂತನೆ ನಡೆಸಿದ್ದಾರೆ.

ಮತ್ತೊಂದೆಡೆ ತನಿಖೆಗೆ ರೇವಣ್ಣ ಸಹಕಾರ ನೀಡದೆ ಜಾಮೀನಿಗೆ ಅರ್ಜಿ ಸಲ್ಲಿಸಿದ್ದಾರೆ. ದೇಶ ಬಿಟ್ಟು ಹೋಗಿರುವ ಸಂಸದ ಪ್ರಜ್ವಲ್ ಸ್ವದೇಶಕ್ಕೆ ಮರಳಿ ತನಿಖೆಗೆ ಸಹಕಾರ ನೀಡದೆ ದೂರ ಉಳಿದಿದ್ದಾರೆ. ಕುಟುಂಬದ ಸದಸ್ಯರು ಒಟ್ಟುಗೂಡಿ ಮುಂದಿನ ನಡೆ ನಿರ್ಧರಿಸುತ್ತಿದ್ದಾರೆ.

ಹೀಗೆ ಒಟ್ಟುಗೂಡಿರುವ ದೇವೇಗೌಡರ ಕುಟುಂಬ, ಪೆನ್ ಡ್ರೈವ್ ನಲ್ಲಿರುವ ವಿಡಿಯೋಗಳನ್ನು ಹರಿಬಿಟ್ಟವರು ಯಾರು? ಅವರ ವಿರುದ್ಧ ಹೇಗೆ ಕಾನೂನು ಹೋರಾಟ ನಡೆಸಬೇಕು? ಡಿಕೆ ಶಿವಕುಮಾರ್ ಸಹಿತ ತಮ್ಮ ವಿರೋಧಿಗಳಿಗೆ ಹೇಗೆ ಪಾಠ ಕಲಿಸಬೇಕು ಎನ್ನುವ ಬಗ್ಗೆ ಚಿಂತನೆ ನಡೆಸಿದ್ದಾರೆ.

ಪ್ರಜ್ವಲ್ ರೇವಣ್ಣ ತಪ್ಪು ಮಾಡಿಲ್ಲ, ಅಂತಹ ಕೃತಗಳಲ್ಲಿ ಭಾಗಿಯಾಗಿಲ್ಲ ಎನ್ನುವುದಾದರೆ ತನಿಖೆಯಿಂದ ತಪ್ಪಿಸಿಕೊಳ್ಳುತ್ತಿರುವುದೇ ಏಕೆ? ಇನ್ನು ಪ್ರಕರಣಕ್ಕೂ ತಮಗೂ ಸಂಬಂಧವೇ ಇಲ್ಲದ ರೇವಣ್ಣ ಸಹ ತನಿಖೆಗೆ ಹಿಂದೇಟು ಹಾಕದೆ ಮಧ್ಯಂತರ ಜಾಮೀನಿಗೆ ಅರ್ಜಿ ಸಲ್ಲಿಸಿದ್ದು ಯಾಕೆ? ಅಪ್ಪ ಮಕ್ಕಳ ಈ ವರ್ತನೆ ನೋಡಿದರೆ ತಪ್ಪು ಮಾಡಿರುವುದು ಅವರೇ ಎನ್ನುವುದು ಸ್ಪಷ್ಟವಾಗುತ್ತದೆ.

ಇವತ್ತು ದೇವೇಗೌಡರ ಕುಟುಂಬ ತಮ್ಮ ಕುಟುಂಬಕ್ಕೆ ಆಗಿರುವ ಮಾನಹಾನಿಯನ್ನ ಸರಿದೂಗಿಸಿಕೊಳ್ಳುವುದು ಹೇಗೆ ಎನ್ನುವ ಚಿಂತೆಯಲ್ಲಿದ್ದಾರೆ. ಆದರೆ ಒಮ್ಮೆಯಾದರೂ ಸಂತ್ರಸ್ತೆಯರ ಬಗ್ಗೆ ಸಹಾನುಭೂತಿ ವ್ಯಕ್ತಪಡಿಸುವ ಕೆಲಸ ಮಾಡಿಲ್ಲ. ದೇವೇಗೌಡ ಕುಟುಂಬಕ್ಕೆ ಆತ್ಮಸಾಕ್ಷಿ ಎನ್ನುವುದು ಇದ್ದರೆ, ಈ ರಾಜ್ಯದ ಮಹಿಳೆಯರ, ಸಂತ್ರಸ್ತೆಯರ ಕ್ಷಮೆ ಕೇಳಬೇಕು.

## ಬಿಸಿಲಿನ ಪ್ರಖರತೆಯಿಂದ ಕಣ್ಣು, ಮೂಗು, ಕಿವಿ ಸಂರಕ್ಷಣೆಗೆ ತಜ್ಞ ವೈದ್ಯರ ಸಲಹೆ

# ತಾಪಮಾನದ ತಾಪತ್ರಯದಿಂದ ಪಾರಾಗಿ

ಈ ಸಲದ ಬೇಸಿಗೆಯ ತಾಪಮಾನ ಹೆಚ್ಚಾಗಿರುವದು ಜನಜೀವನ ಅಷ್ಟೇ ಅಲ್ಲ, ಪ್ರಾಣಿ ಸಂಕುಲನವನ್ನೂ ಘಾಸಿಗೊಳಿಸಿದೆ. ಮನೆಯ ಒಳಗೆ-ಹೊರಗೆ ಇರುವವರೆಗೂ ತಾಪಮಾನದ ತಾಪತ್ರಯ ತಪ್ಪಿಲ್ಲ. 36ರಿಂದ 38 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶವನ್ನು ತಡೆದುಕೊಂಡವರಿಗೆ ಈ ವರ್ಷ 40-44ರ ಗಡಿ ದಾಟಿದರೂ ಸಹಿಸಿಕೊಳ್ಳುವದು ಅನಿವಾರ್ಯವಾಗಿದೆ.

ಬಿಸಿಲಿನ ಪ್ರಖರತೆಯು ಸಹಜವಾಗಿ ಜನತೆಯ ಆರೋಗ್ಯದ ಮೇಲೆ ಪರಿಣಾಮವನ್ನುಂಟು ಮಾಡಿದೆ, ಮಾಡುತ್ತಿದೆ. ಇಂತಹ ತಾಪಮಾನದಿಂದ ಮನುಷ್ಯ ಪಂಚೇಂದ್ರಿಯಗಳ ಆರೋಗ್ಯ ಕಾಪಾಡಿಕೊಳ್ಳುವದು ಭವಿಷ್ಯದ ದೃಷ್ಟಿಯಿಂದ ಅವಶ್ಯವಿದೆ. ವಿಶೇಷವಾಗಿ ತಲೆ, ಮುಖ, ಕಣ್ಣು, ಮೂಗು, ಕಿವಿ ಸೇರಿದಂತೆ ಮೈ-ಕೈಯನ್ನು ಬಿಸಿಲಿನಿಂದ ತಪ್ಪಿಸಿಕೊಂಡು ಕೊಂಚ ತಂಪಾಗಿಸಿಕೊಂಡರೆ ಮಾತ್ರ ನೆಮ್ಮದಿಯ ನಿಟ್ಟುಸಿರು ಅನುಭವಿಸಲು ಸಾಧ್ಯ.

ಬಿಸಿಲು ಆಗುವುದರೊಳಗೆ ಹೊರಗಿನ ಕೆಲಸ ಮುಗಿಸಿಕೊಳ್ಳುವದು, ಆಗಾಗ ನೀರು ಕುಡಿಯುವದು, ಸಮತೋಲಿತ ಆಹಾರ ಸೇವಿಸುವದು, ಕಾಟನ್ ಬಟ್ಟೆ, ಕೂಲಿಂಗ್ ಗ್ಲಾಸ್, ಛತ್ರಿ ಬಳಸುವದನ್ನೂ ರೂಢಿಸಿಕೊಳ್ಳಬೇಕಿದೆ.





ಬಿಸಿ ಗಾಳಿಯಿಂದಾಗಿ ಕಿವಿ, ಮೂಗು ಒಣಗುವಿಕೆ, ಸೋಂಕು ಆಗುವದು. ಇಂತಹ ಸಂದರ್ಭದಲ್ಲಿ ಕೊಬ್ಬರಿ ಎಣ್ಣೆ, ನೀರು ಹಾಕಬಾರದು. ಇವುಗಳನ್ನು ಸಂರಕ್ಷಿಸಿಕೊಳ್ಳಬೇಕು. ಮೂಗಿನಲ್ಲಿ ರಕ್ತಸ್ರಾವ ಸಾಧ್ಯತೆ, ಬಿಪಿ ಇದ್ದವರಿಗೆ ಹೆಚ್ಚಾಗುವ ಸಾಧ್ಯತೆ ಇದೆ. ಮೂಗಿನ ಒಳಗಿನ ಪದರಿನ ತೊಂದರೆ, ಉಸಿರಾಟ ತೊಂದರೆ, ಸೈನಸ್ ಇನ್ಫೆಕ್ಷನ್ ಆಗುವ ಸಾಧ್ಯತೆ ಇದೆ.

ಶಾಖದ ಅಲೆಗಳು ನಮ್ಮನ್ನು ಕೆಟ್ಟದಾಗಿ ಬಾಧಿಸುತ್ತಿರುವುದರಿಂದ, ನಮ್ಮ ದೇಹವನ್ನು ಬಿಸಿಲಿನ ಬೇಗೆಯ ವಿರುದ್ಧ ಕಾಳಜಿ ವಹಿಸುವುದರ ಜೊತೆಗೆ ನಮ್ಮ ದೇಹದ ಪ್ರಮುಖ ಅಂಗಗಳಲ್ಲಿ ಒಂದಾದ ನಮ್ಮ ಕಣ್ಣುಗಳ ಬಗ್ಗೆಯೂ ವಿಶೇಷ ಕಾಳಜಿ ವಹಿಸಬೇಕು.

ಹೆಚ್ಚಿನ ತಾಪಮಾನದ ಕಾರಣದಿಂದಾಗಿ, ಕಣ್ಣುಗಳ ಶುಷ್ಕತೆ ಮತ್ತು ಕಣ್ಣುಗಳನ್ನು ಆಗಾಗ್ಗೆ ಉಜ್ಜುವುದು, ಕಣ್ಣಿನ ಅಲರ್ಜಿಗಳು, ಬ್ಯಾಕ್ಟೀರಿಯಾ ಮತ್ತು ವೈರಲ್ ಕಾಂಜಂಕ್ಟಿವಿಟಿಸ್‌ಗೆ ಕಾರಣವಾಗಬಹುದು. ಈ ಎಲ್ಲಾ ದುಷ್ಪರಿಣಾಮಗಳಿಂದ ನಿಮ್ಮ ಕಣ್ಣುಗಳನ್ನು ರಕ್ಷಿಸಲು ಕೆಲವು ಮಾರ್ಗಗಳು ಇಲ್ಲಿವೆ.

* ಸರಿಯಾದ ಜಲಸಂಚಯನವನ್ನು ಖಚಿತಪಡಿಸಿಕೊಳ್ಳಿ-ಕಣ್ಣೀರಿನ ಫಿಲ್ಮ್ ಅನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಬಹಳಷ್ಟು ದ್ರವಗಳನ್ನು ಕುಡಿಯುವ ಮೂಲಕ ನಾವು ನಮ್ಮನ್ನು ಹೈಡ್ರೀಕರಿಸಬೇಕು.
* ರಕ್ಷಣಾತ್ಮಕ ಕನ್ನಡಕಗಳು ಅಥವಾ ಛಾಯೆಗಳ ಬಳಕೆ-ಗಿಗಿ ತಡೆಯುವ ಕನ್ನಡಕಗಳು ಅಥವಾ ಛಾಯೆಗಳ ಬಳಕೆಯಿಂದ ಹಾನಿಕಾರಕ ನೇರಳಾತೀತ ಕಿರಣಗಳಿಗೆ ನಮ್ಮ ಕಣ್ಣುಗಳು ಒಡ್ಡಿಕೊಳ್ಳುವುದನ್ನು ತಡೆಯಬಹುದು.
* ನೈರ್ಮಲ್ಯವನ್ನು ಕಾಪಾಡಿಕೊಳ್ಳುವುದು ಮುಖ್ಯ- ನಿಮ್ಮ ಕೈಗಳನ್ನು ಸಾಬೂನಿನಿಂದ ಚೆನ್ನಾಗಿ ತೊಳೆಯಿರಿ. ಕಲುಷಿತ ಕೈಗಳಿಂದ ನಿಮ್ಮ ಕಣ್ಣುಗಳನ್ನು ನೇರವಾಗಿ ಸ್ಪರ್ಶಿಸುವ ಮೂಲಕ ನೀವು ಸುತ್ತಮುತ್ತಲಿನ ಯಾವುದೇ ಸೋಂಕನ್ನು ಇನ್ನೊಬ್ಬರಿಗೆ ಸಾಗಿಸಬಹುದು.
* ನಿಮ್ಮ ಕಣ್ಣುಗಳನ್ನು ಉಜ್ಜಬೇಡಿ-ನಿಮ್ಮ ಕಣ್ಣುಗಳನ್ನು ಆಗಾಗ್ಗೆ ಉಜ್ಜುವುದರಿಂದ ನಿಮ್ಮ ಕಣ್ಣುಗಳಿಗೆ ಗಣನೀಯವಾಗಿ ಹಾನಿ ಮಾಡುತ್ತದೆ.
* ಪರದೆಯ ಸಮಯವನ್ನು ಕಡಿಮೆ ಮಾಡಿ-ಮೊಬೈಲ್‌ಗಳು, ಟ್ಯಾಬ್ಲೆಟ್‌ಗಳು ಅಥವಾ ಇನ್ನಾವುದೇ ಗ್ಯಾಜೆಟ್‌ಗಳನ್ನು ನೋಡುವುದರಿಂದ ನಿಧಾನವಾಗಿ ನಿಮ್ಮ ಕಣ್ಣುಗಳಲ್ಲಿ ಶುಷ್ಕತೆ ಉಂಟಾಗುತ್ತದೆ ಮತ್ತು ನೀವು ತಲೆನೋವು ಮತ್ತು ಕಣ್ಣುಗಳಲ್ಲಿ ಸುಡುವ ಸಂವೇದನೆಯನ್ನು ಅನುಭವಿಸಬಹುದು.
* ವೈದ್ಯರನ್ನು ಸಂಪರ್ಕಿಸಿ-ಶಾಖದ ಅಲೆಗಳು ಕಿವಿ, ಮೂಗು ಮತ್ತು ಗಂಟಲಿನ ಮೇಲೆ ವಿವಿಧ ಪರಿಣಾಮಗಳನ್ನು ಬೀರಬಹುದು. ಹೆಚ್ಚಿದ ತಾಪಮಾನ ಮತ್ತು ತೇವಾಂಶವು ಸೈನಸೈಟಿಸ್, ಮೂಗಿನಲ್ಲಿ ಶುಷ್ಕತೆ ಉಂಟು ಮಾಡುತ್ತದೆ. ಮೂಗಿನಿಂದ ಪದೇ ಪದೇ ರಕ್ತ ಬರುವುದು ಮತ್ತು ಅಲರ್ಜಿಯಂತಹ ಪರಿಸ್ಥಿತಿಗಳನ್ನು ಉಲ್ಬಣಗೊಳಿಸಬಹುದು. ಇದು ಮೂಗು ಮತ್ತು ಗಂಟಲಿನಲ್ಲಿ ದಟ್ಟಣೆ ಮತ್ತು ಅಸ್ವಸ್ಥತೆಗೆ ಕಾರಣವಾಗುತ್ತದೆ.

ನಿರ್ಜಲೀಕರಣವು ಸಹ ಒಂದು ಕಾಳಜಿಯಾಗಿದೆ. ಇದು ಗಂಟಲಿನಲ್ಲಿ ಶುಷ್ಕತೆ ಮತ್ತು ಕಿರಿಕಿರಿಯನ್ನು ಉಂಟುಮಾಡಬಹುದು. ಹೆಚ್ಚುವರಿಯಾಗಿ, ಶಾಖಕ್ಕೆ ದೀರ್ಘಕಾಲದವರೆಗೆ ಒಡ್ಡಿಕೊಳ್ಳುವುದರಿಂದ ಶಾಖದ ಬಳಲಿಕೆ ಮತ್ತು ಶಾಖದ ಹೊಡೆತದಂತಹ ಶಾಖ-ಸಂಬಂಧಿತ ಕಾಯಿಲೆಗಳಿಗೆ ಕಾರಣವಾಗಬಹುದು. ಇದು ಕಿವಿ, ಮೂಗು ಮತ್ತು ಗಂಟಲು ಸೇರಿದಂತೆ ಒಟ್ಟಾರೆ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು. ಹೈಡ್ರೀಕರಿಸಿದ (Hydration) ತೇವಾಂಶ ಸ್ಥಿತಿಯಲ್ಲಿರುವುದು, ಸಾಧ್ಯವಾದಾಗ ನೆರಳು ಅಥವಾ ಹವಾನಿಯಂತ್ರಣವನ್ನು ಹುಡುಕುವುದು ಮತ್ತು ಶಾಖದ ಅಲೆಗಳ ಸಮಯದಲ್ಲಿ ಅಧಿಕ ಬಿಸಿಯಾಗುವುದನ್ನು ತಪ್ಪಿಸಲು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವುದು ಮುಖ್ಯವಾಗಿದೆ.

**- ಡಾ. ಚಂದ್ರಶೇಖರ ಆರ್.ಬಳ್ಳಾರಿ.**
ಕಿವಿ, ಮೂಗು, ಗಂಟಲು ತಜ್ಞರು.

- ಡಾ. ರಾಧಿಕಾ ಸಿ.ಬಳ್ಳಾರಿ.
ನೇತ್ರ ತಜ್ಞರು, ಗದಗ.

## ಬಿಆರ್‌ಎಸ್ ಮುಖ್ಯಸ್ಥ ಕೆಸಿಆರ್‌ಗೆ ಚುನಾವಣಾ ಪ್ರಚಾರ ಮಾಡದಂತೆ ನಿರ್ಬಂಧ



■ ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಕಾಂಗ್ರೆಸ್ ವಿರುದ್ಧ ಅವಹೇಳನಕಾರಿ ಮತ್ತು ಆಕ್ಷೇಪಾರ್ಹ ಹೇಳಿಕೆ ನೀಡಿದ ಆರೋಪದಲ್ಲಿ ತೆಲಂಗಾಣ ಮಾಜಿ ಮುಖ್ಯಮಂತ್ರಿ ಮತ್ತು ಬಿಆರ್‌ಎಸ್ ಮುಖ್ಯಸ್ಥ ಕೆ ಚಂದ್ರಶೇಖರ ರಾವ್ ಅವರಿಗೆ ಚುನಾವಣಾ ಆಯೋಗವು 48 ಗಂಟೆಗಳ ಕಾಲ ಪ್ರಚಾರ ಮಾಡದಂತೆ ನಿಷೇಧ ವಿಧಿಸಿದೆ.

ಭಾರತದ ಸಂವಿಧಾನದ 324 ನೇ ವಿಧಿ ಯಡಿಯಲ್ಲಿ, BRS ಅಧ್ಯಕ್ಷರಾದ ಕೆ. ಚಂದ್ರಶೇಖರ ರಾವ್ ಅವರು ಯಾವುದೇ ಸಾರ್ವಜನಿಕ ಸಭೆಗಳು, ಸಾರ್ವಜನಿಕ ಮೆರವಣಿಗೆಗಳು, ಸಾರ್ವಜನಿಕ ರ್ಯಾಲಿಗಳು, ಸಂದರ್ಶನಗಳು, ಸಾರ್ವಜನಿಕ ಹೇಳಿಕೆಗಳನ್ನು ನೀಡದಂತೆ ಚುನಾವಣಾ ಆಯೋಗ ನಿರ್ಬಂಧ ವಿಧಿಸಿದೆ. ಯಾವುದೇ ಎಲೆಕ್ಟ್ರಾನಿಕ್, ಮುದ್ರಣ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಕೂಡ ಹೇಳಿಕೆಗಳನ್ನು ನೀಡದಂತೆ ನಿಷೇಧ ವಿಧಿಸಿದೆ.

ಮೇ1 2024 ರಂದು ರಾತ್ರಿ 8ಗಂಟೆಯಿಂದ 48 ಗಂಟೆಗಳ ಕಾಲ ನಿಷೇಧ ವಿಧಿಸಿ ಚುನಾವಣಾ ಆಯೋಗ ಆದೇಶ ಹೊರಡಿಸಿದೆ.

ಏಪ್ರಿಲ್ 5 ರಂದು ಸಿರ್ಸಿಲ್ಲಾದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕೆಸಿಆರ್ ಅವರು ಕಾಂಗ್ರೆಸ್ ನಾಯಕರನ್ನು 'ನಾಯಿಯ ಮಕ್ಕಳು' ಎಂದು ಉಲ್ಲೇಖಿಸಿದ್ದಲ್ಲದೆ ತೆಲಂಗಾಣ ಸರಕಾರದ ಬಗ್ಗೆ ಹಲವು ವಿವಾದಾತ್ಮಕ ಪದಗಳನ್ನು ಬಳಕೆ ಮಾಡಿದ್ದರು.

ಏಪ್ರಿಲ್ 5ರಂದು ಸಿರಿಸಿಲ್ಲಾದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕೆಸಿಆರ್, ಕಾಂಗ್ರೆಸ್ ಶಾಸಕರನ್ನು ಅವಹೇಳನ ಮಾಡಿದ್ದಾರೆ ಎಂದು ತೆಲಂಗಾಣ ಕಾಂಗ್ರೆಸ್ ಉಪಾಧ್ಯಕ್ಷ ಜಿ ನಿರಂಜನ್ ಏಪ್ರಿಲ್ 6ರಂದು ಚುನಾವಣಾ ಆಯೋಗಕ್ಕೆ ಸಲ್ಲಿಸಿದ ದೂರಿನಲ್ಲಿ ಹೇಳಿದ್ದಾರೆ.

## ಗಾಝಾ ಹತ್ಯಾಕಾಂಡ: ಇಸ್ರೇಲ್ ಜೊತೆ ರಾಜತಾಂತ್ರಿಕ ಸಂಬಂಧಗಳನ್ನು ಮುರಿದ ಕೊಲಂಬಿಯಾ



■ ವಿಜಯಸಾಕ್ಷಿ ಸುದ್ದಿ, ಕೊಲಂಬಿಯಾ

ಇಸ್ರೇಲ್ ಗಾಝಾ ಮೇಲೆ ನಡೆಸುತ್ತಿರುವ ದಾಳಿಯನ್ನು ಆರಂಭದಿಂದಲೇ ಪ್ರತಿಭಟಿಸಿದ್ದ ಕೊಲಂಬಿಯಾ ಇದೀಗ ಮಹತ್ವದ ನಿಲುವನ್ನು ತೆಗೆದುಕೊಂಡಿದ್ದು, ಇಸ್ರೇಲ್‌ನೊಂದಿಗಿನ ರಾಜತಾಂತ್ರಿಕ ಸಂಬಂಧಗಳನ್ನು ಮುರಿದುಕೊಂಡಿದೆ. ಈ ಕುರಿತು ಕೊಲಂಬಿಯಾದ ಅಧ್ಯಕ್ಷ ಗುಸ್ಟಾವೊ ಪೆಟ್ರೋ ಅವರು ಘೋಷಣೆಯನ್ನು ಮಾಡಿದ್ದಾರೆ.

ಕೊಲಂಬಿಯಾದ ಅಧ್ಯಕ್ಷ ಗುಸ್ಟಾವೊ ಪೆಟ್ರೋ, ಇಸ್ರೇಲ್ ಗಾಝಾದಲ್ಲಿ ನಡೆಸುತ್ತಿರುವ ಹತ್ಯಾಕಾಂಡವನ್ನು "ಜನಾಂಗೀಯ ಹತ್ಯೆ" ಎಂದು ಬಣ್ಣಿಸಿದೆ. ಕೊಲಂಬಿಯಾ ಇಸ್ರೇಲ್‌ನ ಆಪ್ತ ದೇಶಗಳಲ್ಲೊಂದಾಗಿತ್ತು. ಆದರೆ ಗಾಝಾದ ಮೇಲೆ ಇಸ್ರೇಲ್ ನಿರಂತರ ದಾಳಿ ಹಿನ್ನೆಲೆ ಈ ಹಿಂದೆ ಇಸ್ರೇಲ್‌ನಿಂದ ಶಸ್ತ್ರಾಸ್ತ್ರಗಳ ಖರೀದಿಯನ್ನು ಕೊಲಂಬಿಯಾ ಸ್ಥಗಿತಗೊಳಿಸಿತ್ತು ಮತ್ತು ಇಸ್ರೇಲ್ ನಡೆಸುತ್ತಿರುವ ಹತ್ಯಾಕಾಂಡವನ್ನು ಜರ್ಮನಿಯ ನಾಝಿ ಕ್ರಮಗಳಿಗೆ ಹೋಲಿಸಿತ್ತು.

## ಮಾಜಿ ಸೈನಿಕರ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಮಾಜಿ ಸೈನಿಕರು ದೇಶದ ಸಂಪತ್ತು

■ ವಿಜಯಸಾಕ್ಷಿ ಸುದ್ದಿ, ಗದಗ



ಗಡಿಯಲ್ಲಿ ದೇಶ ಸೇವೆ ಸಲ್ಲಿಸಿ, ನಿವೃತ್ತಿಯಾಗಿ ಸಮಾಜ ಸೇವೆ ಸಲ್ಲಿಸುತ್ತಿರುವ ಮಾಜಿ ಸೈನಿಕರು ದೇಶದ ಸಂಪತ್ತಾಗಿದ್ದಾರೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕಾಟನ್ ಸೇಲ್ ಸೊಸೈಟಿ ಸಭಾಭವನದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವ ರಮಠ ಅವರ ಪ್ರಚಾರಾರ್ಥವಾಗಿ ನಡೆದ ಮಾಜಿ ಸೈನಿಕರ ಸಭೆಯಲ್ಲಿ ಅವರು ಮಾತನಾಡಿದರು.


ಸ'ವ'ುಾಜ ವ'ನ'್ನ ಸುಧಾರಿಸಬೇಕು, ಬಡತನ ನಿವಾರಣೆ ಮಾಡಬೇಕು, ಶೋಷಣೆ ಹಾಗೂ ಭ್ರಷ್ಟಾಚಾರ ಮುಕ್ತವಾಗಿ ಫಲಾನುಭವಿಗಳಿಗೆ ನೇರವಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸಿದ್ದೇವೆ. ಕಾಂಗ್ರೆಸ್‌ಗೆ ಉತ್ತಮವಾದ ವಾತಾವರಣವಿದ್ದು, ಉತ್ತರ ಕರ್ನಾಟಕದ 10ಕ್ಕೆ 10 ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂಬ ಭರವಸೆ ಬಂದಿದೆ ಎಂದು ಹೇಳಿದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಬೆಂಬಲ ನೀಡಬೇಕು. ಅವರ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿ, ನನಗೆ ಬಲ ತುಂಬಬೇಕು ಎಂದು ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಾಜಿ ಸೈನಿಕರಾದ ರಂಗಪ್ಪ ತಳವಾರ, ಮಲ್ಲಿಕಾರ್ಜುನ ಕೊರಕನವರ, ನರಸಿಂಹಸ್ವಾಮಿ ದೇವಾಂಗಮಠ, ಜಿ.ಬಿ. ಮಾಲಗಿತ್ತಿಮಠ, ರವಿಕುಮಾರ್ ಜಂಗಮನಿ, ಈರಣ್ಣ ಅಣ್ಣಿಗೇರಿ, ಮಹಾಂತೇಶ ಲಕ್ಕುಂಡಿ, ವೀರನಾರಿಯರಾದ ಇಂದಿರಾ ಹೆಬಸೂರ, ಜಯಲಕ್ಷ್ಮೀ ಹೂಗಾರ, ಹೇಮಾ ಪಾಟೀಲ, ಮುಖಂಡರಾದ ಬಸವರಾಜ ಗುರಿಕಾರ, ವಿ.ಎ. ಹಿರೇಮಠ, ವಿಶ್ವನಾಥ, ಅಶೋಕ ಮಂದಾಲಿ, ಬಸವರಾಜ ಬಳ್ಳಾರಿ, ಬಸವರಾಜ ಕಡೇಮನಿ ಸೇರಿ ಹಲವರು ಇದ್ದರು.

# ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆ

■ ವಿಜಯಸಾಕ್ಷಿ ಸುದ್ದಿ, ಗದಗ




ನೇಕಾರರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ, ವಿ.ಪ ಮಾಜಿ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ ಭಾಜಪ ಜಿಲ್ಲಾಧ್ಯಕ್ಷ ರಾಜು ಕುರಡಗಿ ನೇತೃತ್ವದಲ್ಲಿ ಅರವಿಂದ ಹುಲ್ಲೂರ ಮತ್ತೆ ಬಿಜೆಪಿಗೆ ಸೇರ್ಪಡೆಯಾದರು.

ಬಸವರಾಜ ಬೊಮ್ಮಾಯಿ ಅವರು ಮುಖ್ಯ ಮಂತ್ರಿಯಾಗಿದ್ದ ಸಂದರ್ಭದಲ್ಲಿ ನೇಕಾರರ ಮಕ್ಕಳಿಗೆ ವಿದ್ಯಾಸಿರಿ ಯೋಜನೆಯನ್ನು ಜಾರಿಗೊಳಿಸಿ ಶೈಕ್ಷಣಿಕವಾಗಿ ಸದೃಢವಾಗಲು ಆಸರೆಯಾಗಿದ್ದರು. ಕೇಂದ್ರದ ಬಿಜೆಪಿ ಸರ್ಕಾರವೂ ನೇಕಾರ ವರ್ಗದವರಿಗೆ ಪ್ರೋತ್ಸಾಹ ನೀಡಿದೆ. ಅದಕ್ಕಾಗಿ ಮರಳಿ ಬಿಜೆಪಿ ಸೇರ್ಪಡೆಯಾಗಿ ಬಸವರಾಜ ಬೊಮ್ಮಾಯಿರವರನ್ನು ಜಯಗೊಳಿಸಲು ಶ್ರಮಿಸುತ್ತೇನೆ ಎಂದು ಅರವಿಂದ ಹುಲ್ಲೂರ ಹೇಳಿದರು.

ಈ ಸಂದರ್ಭದಲ್ಲಿ ನಗರ ಅಧ್ಯಕ್ಷರಾದ ಅನಿಲ ಅಬ್ಬಿಗೇರಿ, ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ ಯಳವತ್ತಿ, ನಗರಸಭಾ ಸದಸ್ಯರಾದ ವಿನಾಯಕ ಮಾನ್ವಿ, ಮಾಧುಸಾ ಮೇರವಾಡೆ, ಮುಖಂಡರಾದ ಪ್ರೇಮನಾಥ ಬಣ್ಣದ, ಡಿ.ಜಿ. ಕೊಳ್ಳಿ, ಎಂ.ಎಸ್. ಕರೀಗೌಡ್ರ, ದೇವಪ್ಪ ಗೊಟೂರ, ಎಂ.ಎಂ. ಹಿರೇಮಠ, ಶಿಶಧರ ದಿಂಡೂರ, ಸಿದ್ದು ಪಲ್ಲೇದ, ನೇಕಾರರ ಪ್ರಕೋಷ್ಠದ ಜಿಲ್ಲಾ ಸಂಚಾಲಕ ಅನಿಲ ಗಡ್ಡಿ, ಚಿನ್ನಪ್ಪ ನೆಗಳೂರ, ಶಂಕರ ಕಾಕಿ, ಜಗನ್ನಾಥಸಾ ಭಾಂಡಗೆ, ಮಂಜುನಾಥ ಮ್ಯಾಗೇರಿ, ರವಿ ಗಂಜಿ, ವಿನೋದ ಹಂಸನೂರ ಮುಂತಾದವರಿದ್ದರು.

## ಅಣ್ಣಿಗೇರಿ ತಾಲೂಕಿನಲ್ಲಿ ಗಂಗಾಧರಮಠ, ಗಡ್ಡಿ ಪ್ರಚಾರ ಇಂದು

■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಧಾರವಾಡ ಲೋಕಸಭೆಗೆ ಸ್ಪರ್ಧಿಸಿರುವ ಎನ್ ಡಿ ಎ ಮೈತ್ರಿಕೂಟದ ಅಭ್ಯರ್ಥಿ ಬಿಜೆಪಿಯ ಪ್ರಹ್ಲಾದ ಜೋಶಿ ಪರವಾಗಿ ಜಿಲ್ಲಾ ಜೆಡಿಎಸ್ ನಾಯಕರು ಇಂದು ಶುಕ್ರವಾರ ಅಣ್ಣಿಗೇರಿ ತಾಲೂಕಿನಲ್ಲಿ ಪ್ರಚಾರ ಕಾರ್ಯ ಕೈಗೊಳ್ಳಲಿದ್ದಾರೆ.

ಧಾರವಾಡ ಜಿಲ್ಲಾ (ಗ್ರಾಮಾಂತರ) ಜೆಡಿಎಸ್ ಅಧ್ಯಕ್ಷ ಬಿ.ಬಿ. ಗಂಗಾಧರಮಠ, ಮಾಜಿ ಸಚಿವ ಕೆ.ಎನ್.ಗಡ್ಡಿ, ನಾಯಕರಾದ ಜಿ.ಎನ್ ತೋಟದ, ಶ್ರೀಶೈಲ ಮೂಲಿಮನಿ, ಪ್ರಕಾಶ ಅಂಗಡಿ, ಶಿವಶಂಕರ ಕಲ್ಲೂರ, ಡಿ ಎಂ ಶಲವಡಿ ಮತ್ತಿತರರು ಪ್ರಚಾರ ಕಾರ್ಯದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಜೆಡಿಎಸ್ ಅಣ್ಣಿಗೇರಿ ನಗರ ಘಟಕದ ಅಧ್ಯಕ್ಷ ವೀರೇಶ ಶಾನುಭೋಗರ ತಿಳಿಸಿದ್ದಾರೆ.

## ಪ್ರಜ್ವಲ್ ರೇವಣ್ಣ ವಿರುದ್ಧ ಮತ್ತೊಂದು ಪ್ರಕರಣ ದಾಖಲು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪೆನ್‌ಡ್ರೈವ್ ವಿಡಿಯೋ ವೈರಲ್ ಬಳಿಕ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿರುವ ಹಾಸನ ಕ್ಷೇತ್ರದ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಮತ್ತೊಂದು ಪ್ರಕರಣ ದಾಖಲಾಗಿದೆ.

ಲೈಂಗಿಕ ದೌರ್ಜನ್ಯ ಎಸಗಿ ಕೊಲೆ ಬೆದರಿಕೆಯೊಡ್ಡಿರುವ ಆರೋಪದಡಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಮಹಿಳೆಯೊಬ್ಬರು ಪ್ರಕರಣ ದಾಖಲಿಸಿದ್ದಾರೆ.

ಈ ಕುರಿತು ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ರೇವಣ್ಣ ಅವರು ಇಂದು ಅಧಿಕಾರಿಗಳ ಮುಂದೆ ಹಾಜರಾಗುತ್ತೇನೆ ಎಂದು ಹೇಳಿದ್ದಾರೆ.

## ಶಿವಾನಂದ ಹಿರೇಮಠರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ಕಾರ್ಮಿಕ ಘಟಕದ ರಾಜ್ಯಾದ್ಯಕ್ಷ, ಗಣ್ಯ ಉದ್ದಿಮೆದಾರರು ಹಾಗೂ ಸಾಮಾಜಿಕ ಕಾರ್ಯಕರ್ತ ಶಿವಾನಂದ ಹಿರೇಮಠ ಅವರ ನಾಡು-ನುಡಿ, ಸಂಸ್ಕೃತಿ ಪರವಾಗಿ ನಡೆಸಿರುವ ಹೋರಾಟ ಹಾಗೂ ಅವರ ಸಾಮಾಜಿಕ ಸೇವೆಯನ್ನು ಗುರುತಿಸಿರುವ ತಮಿಳುನಾಡಿನ ಏಶಿಯಾ ಇಂಟರ್‌ನ್ಯಾಶನಲ್ ಕಲ್ಚರ್ ಅಕಾಡೆಮಿ ಇತ್ತೀಚೆಗೆ ಗೌರವ ಡಾಕ್ಟರೇಟ್‌ನ್ನೀಡಿ ಗೌರವಿಸಿದ ಹಿನ್ನೆಲೆಯಲ್ಲಿ ಶ್ರೀ ಮಹಾಲಕ್ಷ್ಮೀ ಖಾರಾ ಇಂಡಸ್ಟ್ರೀಸ್ ಕಾರ್ಮಿಕರು ಹಿರೇಮಠ ದಂಪತಿಗಳನ್ನು ಸನ್ಮಾನಿಸಿ, ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಡಾ. ಶಿವಾನಂದಯ್ಯ ಹಿರೇಮಠ ಮಾತನಾಡಿ, ವಿಶ್ವಗುರು ಬಸವಣ್ಣನವರ ಕಾಯಕವೇ ಕೈಲಾಸ ಎಂಬ ಮಾತಿನಲ್ಲಿ ನಂಬಿಕೆಯನ್ನು ಇಟ್ಟು ಶ್ರೀ ಮಹಾಲಕ್ಷ್ಮೀ ಖಾರಾ ಇಂಡಸ್ಟ್ರೀಸ್ ಹುಟ್ಟು ಹಾಕಿ, ಈ ಮೂಲಕ 15 ಕಾರ್ಮಿಕರಿಗೆ ಉದ್ಯೋಗ ನೀಡಿದ್ದೇನೆ. ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷನಾಗಿ ಕಾರ್ಮಿಕರ ಹಿತವನ್ನು ಬಯಸುತ್ತಿರುವ ನನಗೆ ಕಾರ್ಮಿಕ ದಿನಾಚರಣೆಯಂದೇ ನನ್ನ ಕಾರ್ಮಿಕರು ನನಗೆ ಸನ್ಮಾನಿಸಿ, ಗೌರವಿಸುವ ಮೂಲಕ ನನ್ನ ಮೇಲೆ ತಮ್ಮ ಅಭಿಮಾನ ವ್ಯಕ್ತಪಡಿಸಿರುವುದು ಸಂತಸ ತಂದಿದೆ ಎಂದರು.

ಈ ಸಂದರ್ಭದಲ್ಲಿ ವೀರೇಶ, ಮೃತ್ಯುಂಜಯ, ಅಬಿಷೇಕ, ಅಶ್ವಿನಿ, ಕಾರ್ಮಿಕ ಬಂಧುಗಳಾದ ವೀರಯ್ಯ, ಲಕ್ಷ್ಮಣ, ಪರಮೇಶಿ, ಕುಶಾಲ, ಕಲ್ಲಪ್ಪ, ಮಂಜು, ದರ್ಶನ, ಅಂಬರೀಶ, ಅಕ್ಕಮ್ಮ, ರೇಣುಕಾ, ನೇತ್ರಾ, ಕುಸುಮಾ ಸೇರಿದಂತೆ ಹಲವರಿದ್ದರು.

## ಮೋದಿಗೆ ಕಾಂಗ್ರೆಸ್ ಪ್ರಣಾಳಿಕೆಯನ್ನು ವಿವರಿಸಿ ಪತ್ರ ಬರೆದ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಕಾಂಗ್ರೆಸ್ ಪ್ರಣಾಳಿಕೆಯ ಬಗ್ಗೆ ಮೋದಿ, ಅಮಿತ್ ಶಾ ಚುನಾವಣಾ ಭಾಷಣದಲ್ಲಿ ಸುಳ್ಳು ಆಪಾದನೆ ಮಾಡುತ್ತಿರುವ ಮಧ್ಯೆ ಕಾಂಗ್ರೆಸ್ ಪ್ರಣಾಳಿಕೆ ಬಗ್ಗೆ ಚರ್ಚೆಗೆ ನರೇಂದ್ರ ಮೋದಿ ಅಥವಾ ಅವರಿಂದ ನಿಯೋಜಿಸಲ್ಪಟ್ಟ ಯಾರಾದರು ಬನ್ನಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಹ್ವಾನವನ್ನು ನೀಡಿದ್ದರು. ಆದರೆ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ಬರದ ಹಿನ್ನೆಲೆ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿಯವರಿಗೆ ಪತ್ರವನ್ನು ಬರೆದು ಕಾಂಗ್ರೆಸ್ ಪ್ರಣಾಳಿಕೆಯಲ್ಲಿನ ಅಂಶಗಳನ್ನು ವಿವರಿಸಿದ್ದಾರೆ.

ಈ ಕುರಿತು ಪತ್ರವನ್ನು ಎಕ್ಸ್‌ನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಂಚಿಕೊಂಡಿದ್ದಾರೆ. ಚುನಾವಣಾ ಪ್ರಚಾರದಲ್ಲಿ ಪದೇ ಪದೇ ಸುಳ್ಳು ಹೇಳುತ್ತಿರುವ ನರೇಂದ್ರ ಮೋದಿ ಅವರಿಗೆ ನನ್ನ ಪತ್ರ ಹಂಚಿಕೊಳ್ಳುತ್ತಿದ್ದೇನೆ ಎಂದು ಬರೆದಿದ್ದಾರೆ.


ಆತ್ಮೀಯ ಪ್ರಧಾನ ಮಂತ್ರಿಗಳೇ,

ಮತದಾರರಿಗೆ ಏನು ತಿಳಿಸಬೇಕು ಎಂದು ನೀವು ಎನ್‌ಡಿಎ ಅಭ್ಯರ್ಥಿಗಳಿಗೆ ಬರೆದ ಪತ್ರವನ್ನು ನಾನು ನೋಡಿದೆ.

ಪತ್ರದ ವಿಷಯಗಳನ್ನು ಗಮನಿಸಿದಾಗ ನಿಮ್ಮಲ್ಲಿ ಬಹಳಷ್ಟು ಹತಾಶೆ ಮತ್ತು ಚಿಂತೆ ಇದೆ ಎಂದು ತೋರುತ್ತದೆ, ಇದು ಪ್ರಧಾನ ಮಂತ್ರಿಯ ಘನತೆಗೆ ಹೊಂದಿಕೆಯಾಗದ ಭಾಷೆಯನ್ನು ಬಳಸಲು ನಿಮ್ಮನ್ನು ಪ್ರೇರೇಪಿಸುತ್ತದೆ. ಪತ್ರವು ನಿಮ್ಮ ಭಾಷಣಗಳಲ್ಲಿನ ಸುಳ್ಳುಗಳು ನೀವು ಉದ್ದೇಶಿಸಿರುವ ಪರಿಣಾಮವನ್ನು ಬೀರಿಲ್ಲ ಎಂದು ತೋರುತ್ತದೆ, ಅದಕ್ಕೆ ಈಗ ನಿಮ್ಮ ಅಭ್ಯರ್ಥಿಗಳಲ್ಲಿ ಈ ಸುಳ್ಳುಗಳನ್ನು ಹೇಳಿಸುತ್ತಿದ್ದೀರಿ, ಒಂದು ಸುಳ್ಳನ್ನು ಸಾವಿರ ಬಾರಿ ಪುನರಾವರ್ತಿಸಿದರೂ ಅದು ಸತ್ಯವಾಗುವುದಿಲ್ಲ ಎಂದು ಹೇಳಿದ್ದಾರೆ.

### ದ್ವಾದಶ ಪಟ್ಟಾಧಿಕಾರದ ವರ್ಧಂತಿ ಮಹೋತ್ಸವ ಧರ್ಮ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಜೀವನದಲ್ಲಿ ನಿರ್ದಿಷ್ಟ ಗುರಿಯಿರಬೇಕು



■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಸ್ವಾರ್ಥ ರಹಿತವಾದ ಬದು-ಕಿಗೆ ಬೆಲೆ-ನೆಲೆಯಿದೆ. ಅದರಲ್ಲಿ ಅಂಥ ಅದ್ಭುತ ಶಕ್ತಿಯಿದೆ. ಜೀವನದಲ್ಲಿ ಉತ್ಸಾಹ ಇದ್ದರೆ ಸಾಧನೆ ಸಿದ್ಧಿಯಾಗುತ್ತದೆ. ಜನ ಮೆಚ್ಚುವಂತಹ ಕೆಲಸ ದೊಡ್ಡದಾದ-ರೆ ದೈವ ಮೆಚ್ಚುವಂತಹ ಕೆಲಸ ಅದಕ್ಕಿಂತಲೂ ದೊಡ್ಡದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಮಾಚಗೊಂಡನಹಳ್ಳಿ ಶ್ರೀ ಬೇರುಗಂಡಿ ಬೃಹನ್ಮಠದ ಶ್ರೀ ಸಿದ್ಧೇಶ್ವರಸ್ವಾಮಿ ದೇವಾಲಯದ ಕಳಸಾರೋಹಣ ಹಾಗೂ ರೇಣುಕ ಮಹಾಂತ ಶಿವಾಚಾರ್ಯರ ದ್ವಾದಶ ಪಟ್ಟಾಧಿಕಾರದ ವರ್ಧಂತಿ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ನಿರ್ದಿಷ್ಟ ಗುರಿಯಿರಬೇಕು. ಆ ಗುರಿ ಸಾಧನೆಗಾಗಿ ನಿರಂತರ ಪ್ರಯತ್ನ ಬೇಕು. ಮನುಷ್ಯನಲ್ಲಿ ದೃಢ ಸಂಕಲ್ಪ ಗಟ್ಟಿಯಾಗಿದ್ದರೆ ಸತ್ಫಲ ಕಟ್ಟಿಟ್ಟ ಬುತ್ತಿ. ಕರ್ತವ್ಯದ ಕಾಲು ದಾರಿ ಕೀರ್ತಿಯ ಹೆದ್ದಾರಿ. ಸೌಂದರ್ಯ ಜನರ ಗಮನ ಸೆಳೆಯಬಹುದು. ಆದರೆ ವ್ಯಕ್ತಿತ್ವ ಮನಸ್ಸನ್ನು ಆವರಿಸುತ್ತದೆ. ಭಾರವಿಲ್ಲದ ನೋಟಿಗೆ ಇರುವ ಬೆಲೆ ಭಾವನೆಗಳಿರುವ ಮನುಷ್ಯನಿಗೆ ಇಲ್ಲ. ಬದುಕಿಗೆ ಬಲ ಬರಬೇಕಾಗಿದ್ದರೆ ಸತ್ಕಾರ್ಯ ಸೇವಾ ಮನೋಭಾವ ಮತ್ತು ಉತ್ತಮ ಸಂಸ್ಕಾರ ಪಡೆದರೆ ಬಾಳಿನಲ್ಲಿ ಶ್ರೇಯಸ್ಸನ್ನು ಕಾಣಬಹುದು. ಶ್ರೀ ಮಠದ ಪರಿಸರದಲ್ಲಿ ಅಭಿವೃದ್ಧಿ ಕಾರ್ಯಗಳು ಶ್ರೀಗಳವರ ಕ್ರಿಯಾಶೀಲತೆಗೆ ಸಾಕ್ಷಿಯಾಗಿವೆ ಎಚಿದರು.

ಸಮಾರಂಭ ಉದ್ಘಾಟಿಸಿದ ಶಾಸಕ ಟಿ.ಡಿ. ರಾಜೇಗೌಡರು ಮಾತನಾಡಿ, ಬೆಂದು ಬಸವಳಿದ ಮನಸ್ಸಿಗೆ ನೆಮ್ಮದಿ ಸಿಗಲು ಮನುಷ್ಯ ಧಾರ್ಮಿಕ ಕ್ಷೇತ್ರಗಳಿಗೆ ಹೋಗಬೇಕಾಗುತ್ತದೆ. ಶಾಚಿತಿ-ನೆಮ್ಮದಿಗಿಂತ ಮಿಗಿಲಾದ ಯಾವುದೇ ಸಂಪತ್ತಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ, ಸಾಮಾಜಿಕ ಚಿಂತನಗಳು ಸಕಲರ ಬದುಕಿನಲ್ಲಿ ಆಶಾ ಕಿರಣವಾಗಿವೆ. ಧರ್ಮ ಪಾಲನೆಯಿಂದ ಜೀವನ ಉಜ್ವಲಗೊಳ್ಳುವುದೆಂದರು.

> ಪ್ರಾಸ್ತಾವಿಕವಾಗಿ ಮಾತನಾಡಿದ ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು, ಬದುಕಲು ಹಣ ಬೇಕು. ಹೊಂದಿಕೊಂಡು ಬಾಳಲು ಗುಣ ಬೇಕು. ಕೆಟ್ಟವರು ತುಂಬಾ ಬೆಳೆಯಬಹುದು. ಆದರೆ ಉಳಿಯಲು ಸಾಧ್ಯವಿಲ್ಲ. ಒಳ್ಳೆಯವರನ್ನು ತುಂಬಾ ತುಳಿಯಬಹುದು ಆದರೆ ನಾಶಪಡಿಸಲು ಯಾರಿಂದಲೂ ಸಾಧ್ಯವಿಲ್ಲ. ಶ್ರೀ ರಂಭಾಪುರಿ ಜಗದ್ಗುರುಗಳವರ ಮಾರ್ಗದರ್ಶನ ಲಿಂ.ಚಂದ್ರಶೇಖರ ಶ್ರೀಗಳ ಆಶೀರ್ವಾಧ ಮತ್ತು ಭಕ್ತರ ಸಹಕಾರದಿಂದ ಇಷ್ಟೆಲ್ಲ ಕಾರ್ಯ ಮಾಡಲು ಸಾಧ್ಯವಾಗಿದೆ ಎಂದರು.

ನೊಣವಿನಕೆರೆ ಡಾ. ಕರಿವೃಷಭ ಶಿವಯೋಗೀಶ್ವರ ಸ್ವಾಮಿಗಳು ನೇತೃತ್ವ ವಹಿಸಿ ಲಿಂ.ಶ್ರೀಮದ್ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ವಿಶ್ವ ಬಂಧುತ್ವದ ಚಿಂತನೆಗಳನ್ನು ಹಂಚಿಕೊಂಡರು. ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶಿವಾಚಾರ್ಯರು ಅಧ್ಯಕ್ಷತೆ ವಹಿಸಿದ್ದರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಚಿಕ್ಕಮಗಳೂರು ಶಂಕರದೇವರಮಠದ, ಹುಣಸಘಟ್ಟ ಹಾಲುಸ್ವಾಮಿಮಠದ, ಬೀರೂರು ಬಾಳೆಹೊನ್ನೂರು ಖಾಸಾ ಮಠದ, ತೆಂಡೇಕೆರೆ ಮಠದ, ಹೆಗ್ಗಡಹಳ್ಳಿ ಹಿರೇಮಠದ, ಸಂಗೊಳ್ಳಿ ಹಿರೇಮಠದ, ನೆಗಳೂರು ಹಿರೇಮಠದ, ಹಣ್ಣೆ ಮಠದ ಶ್ರೀಗಳು ಉಪಸ್ಥಿತರಿದ್ದರು.

ಮಾಜಿ ಸಚಿವ ಬಿ.ಬಿ. ನಿಂಗಯ್ಯ, ಮಾಜಿ ಶಾಸಕ ಎಮ್.ಪಿ. ಕುಮಾರಸ್ವಾಮಿ, ಹೆಚ್.ಎಮ್. ಲೋಕೇಶ್, ಕೆ.ವಿ. ವೀರರಾಜಗೌಡರು, ಮಹೇಶ್ ಕೆ.ಎಸ್, ಚಿಕ್ಕಮಗಳೂರಿನ ಜಿ.ಎಮ್. ರಾಜಶೇಖರ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಅರ್ಪಿತಾ ಮತ್ತು ಎನ್.ಎನ್. ಯುವರಾಜ ದಂಪತಿಗಳಿಗೆ ವಿಶೇಷ ಗುರುರಕ್ಷೆಯಿತ್ತು ಆಶೀರ್ವದಿಸಿದರು. ದೇವಿ ಗುರುಕುಲದವರಿಂದ ಪ್ರಾರ್ಥನೆ, ಬಿ.ಎ. ಶಿವಶಂಕರ್ ಇವರಿಂದ ಸ್ವಾಗತ, ವೇದಶ್ರೀ ಇವರಿಂದ ಭರತ ನಾಟ್ಯ ಜರುಗಿತು. ಗೋಣಿಬೀಡು ಮೋಹನ್ ರಾಜಣ್ಣ ಮತ್ತು ರಂಭಾಪುರಿ ಪೀಠದ ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

## ವಿಶ್ವಕರ್ಮ ಕಾರ್ಮಿಕರ ದಿನಾಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಿಶ್ವಕರ್ಮ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಸಂಘದ ಕಾರ್ಯಾಲಯದಲ್ಲಿ ವಿಶ್ವ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಯಿತು.

ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಆರ್.ಡಿ. ಕಡ್ಲಿಕೊಪ್ಪ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಾರ್ಮಿಕರ ಕಲ್ಯಾಣದಲ್ಲಿಯೇ ದೇಶದ ಕಲ್ಯಾಣ ಅಡಗಿದೆ ಎಂದರು. ಕಾರ್ಮಿಕರ ಸಂಘದ ಅಧ್ಯಕ್ಷ ವೀರಣ್ಣ ಹಲವಾಗಲಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷರಾದ ನಾಗರಾಜ್ ಕಮ್ಮಾರ್, ರಾಘವೇಂದ್ರ ಬಡಿಗೇರ್, ಸಂಘದ ಪದಾಧಿಕಾರಿಗಳಾದ ಶಂಕರಾಚಾರ್ಯ ಪತ್ತಾರ್, ಮಹೇಶ್ ಬಡಿಗೇರ್, ಪ್ರಕಾಶ್ ಬಡಿಗೇರ್, ಈರಣ್ಣ ಪತ್ತಾರ್, ಈಶ್ವರ್ ಪತ್ತಾರ್, ವಿಶ್ವನಾಥ್ ಬಡಿಗೇರ್, ಕುಮಾರ್ ಬಡಿಗೇರ್, ಚೇತನ್ ಹುಲಬಜಾರ್, ಮೌನೇಶ್ ಪತ್ತಾರ್, ಮೌನೇಶ್ ಬಡಿಗೇರ್, ಚಿನ್ನಪ್ಪ ಬಡಿಗೇರ್, ಯುವ ಪರಿಷತ್ ಅಧ್ಯಕ್ಷರಾದ ಮಹೇಶ್ ಕಮ್ಮಾರ್, ಮಹಾಸಭಾಧ್ಯಕ್ಷ ದೇವೇಂದ್ರಪ್ಪ ಬಡಿಗೇರ್ ಹಾಗೂ ಸಮಾಜದ ಯುವ ಮುಖಂಡರು, ಗ್ರಾಮಸ್ಥರು ಭಾಗಿಯಾಗಿದ್ದರು.

## ಪ್ರಜಾಪ್ರಭುತ್ವದ ಆಶಯ ಸಾಕಾರಗೊಳಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅರ್ಹ ಮತದಾರರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಸಂಕಲ್ಪ ಮಾಡಿ, ಪ್ರಜಾಪ್ರಭುತ್ವದ ಆಶಯ ಸಾಕಾರಗೊಳಿಸಬೇಕು ಎಂದು ಬಟ್ಟೂರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ಆರ್. ಮಾದರ ಹೇಳಿದರು.

ಲಕ್ಷ್ಮೇಶ್ವರ ತಾಲೂಕಿನ ಬಟ್ಟೂರ ಗ್ರಾಮ ಪಂಚಾಯಿತಿಯ ಕುಂದ್ರಳ್ಳಿ ಗ್ರಾಮದಲ್ಲಿಯ ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಾಗೂ ಕಾರ್ಮಿಕ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಚುನಾವಣೆಯನ್ನು ಪ್ರಜಾಪ್ರಭುತ್ವದ ಹಬ್ಬವೆಂದು ಭಾವಿಸಿ ಸಂಭ್ರಮಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ಕಾರ್ಮಿಕರು ಕಡ್ಡಾಯವಾಗಿ ಮತ ಚಲಾಯಿಸಬೇಕು. ಯಾವುದೇ ಆಸೆ-ಆಮಿಷಕ್ಕೆ ಒಳಗಾಗದೇ ಮತ ಚಲಾಯಿಸಿ, ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ತಾಲೂಕಿನ ಗ್ರಾಮೀಣ ಪ್ರದೇಶದಲ್ಲಿಯ ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳದಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡುವ ಕಾರ್ಯ ಮಾಡುತ್ತಿದ್ದೇವೆ. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನಕ್ಕೆ ನಿಗದಿ ಪಡಿಸಲಾಗಿದೆ. ಎಲ್ಲರೂ ಪ್ರಜಾಪ್ರಭುತ್ವದ ಮತದಾನದಲ್ಲಿ ಭಾಗಿಯಾಗುವಂತೆ ತಿಳಿಸಿದರು.

ಈ ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದ್ದು, ರೈತರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೇಕ್ ಕತ್ತರಿಸುವ ಮೂಲಕ ಕಾರ್ಮಿಕ ದಿನಾಚರಣೆ ಆಚರಿಸಲಾಯಿತು. ಕಡ್ಡಾಯ ಮತದಾನ ಮಾಡುವ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು. ಡಿಇಒ ಹಾಲೇಶ ಪಾಟೀಲ, ಗ್ರಾಮ ಕಾಯಕ ಮಿತ್ರ ಗಂಗಮ್ಮ ಹರಿಜನ, ಗ್ರಾ.ಪಂ ಸಿಬ್ಬಂದಿಗಳು, ನರೇಗಾ ಕಾಯಕ ಬಂಧುಗಳು, ಕೂಲಿ ಕಾರ್ಮಿಕರು ಹಾಜರಿದ್ದರು.

## ಕೆಆರ್‌ಎಸ್ ಅಭ್ಯರ್ಥಿಯಿಂದ ಪ್ರಚಾರ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಇದರ ಸಂಪೂರ್ಣ ಕಡಿವಾಣಕ್ಕೆ ಕರ್ನಾಟಕದ ಸಮಗ್ರ ಅಭಿವೃದ್ಧಿಯ ಗುರಿ ಹೊಂದಿರುವ ಕೆಆರ್‌ಎಸ್ ಪಕ್ಷದ ಪ್ರಾಮಾಣಿಕ ನಡೆಗೆ ಮತ ನೀಡಬೇಕು ಎಂದು ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ (ಕೆಆರ್‌ಎಸ್)ಅಭ್ಯರ್ಥಿ ತನು ಯಾದವ್ ಹೇಳಿದರು.

ಅವರು ಪಟ್ಟಣದಲ್ಲಿ ಮತದಾರರನ್ನು ಭೇಟಿಯಾಗಿ ಮತಯಾಚನೆ ಮಾಡಿ ಮಾತನಾಡಿದರು. ಕರ್ನಾಟಕದ ನೆಲ-ಜಲದ ರಕ್ಷಣೆ, ಗಡಿ ಸಂರಕ್ಷಣೆ, ಕನ್ನಡಕ್ಕೆ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರಕ್ಕೆ ಹೆಚ್ಚಿನ ಅನುದಾನ, ಹಾವೇರಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ, ಬ್ಯಾಂಕಿಗ್ ಹಾಗೂ ಕೇಂದ್ರ ಸರಕಾರದ ನೇಮಕಾತಿಯಲ್ಲಿ ಕನ್ನಡಿಗರಿಗೆ ಆಗುವ ಅನ್ಯಾಯ ಸರಿಪಡಿಸುವುದು ಸೇರಿದಂತೆ ಅನೇಕ ಜನಪರ ಕೆಲಸ ಮಾಡಲು ಕೆಆರ್‌ಎಸ್ ಪಣ ತೊಟ್ಟಿದೆ. ಅದಕ್ಕಾಗಿ ತಮ್ಮ ಅಮೂಲ್ಯವಾದ ಮತವನ್ನು ನೀಡಿ ತಮ್ಮನ್ನು ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕೆಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷ ನೀಲಪ್ಪ ಕಟಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೀರನಗೌಡ ಮೂಗನೂರ, ಕಾರ್ಯಕರ್ತರು ಇದ್ದರು.

### 11ನೇ ವಾರ್ಡ್‌ನಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಪರ ಸಚಿವ ಎಚ್.ಕೆ. ಪಾಟೀಲ ಪ್ರಚಾರ

# ಬಡವರ ಕಲ್ಯಾಣ ಕಾಂಗ್ರೆಸ್‌ನ ಆಶಯ

■ವಿಜಯಸಾಕ್ಷಿ ಸುದ್ದಿ, ಗದಗ



ಸುಳ್ಳು ಭರವಸೆಗಳ ಮೂಲಕ ದೇಶದ ಜನತೆಗೆ ಮೋಸ ಮಾಡಿರುವ ಕೇಂದ್ರ ಬಿಜೆಪಿ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

11ನೇ ವಾರ್ಡಿನ ವಿವೇಕಾನಂದ ನಗರದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ಹಮ್ಮಿಕೊಂಡಿದ್ದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಪ್ರಸ್ತುತ ನಡೆಯುತ್ತಿರುವ ಲೋಕಸಭಾ ಚುನಾವಣೆಯ ಮೊದಲನೇ ಸುತ್ತಿನ 140 ಲೋಕಸಭಾ ಕ್ಷೇತ್ರದ ಚುನಾವಣೆಯ ಮತದಾನದ ನಂತರ ಸೋಲಿನ ಭಯ ಕಾಡುತ್ತಿದ್ದು, ಹತಾಶೆ ಕಂಡುಬರುತ್ತಿದೆ. ಮೋದಿ ಅವರ ಉದ್ದೇಶ ಹಾಗೂ ಭಾಷೆಯ ಶೈಲಿ ಬದಲಾಗಿದೆ ಎಂದರು.

11ನೇ ವಾರ್ಡ್ ಪ್ರಜ್ಞಾವಂತರ ಬೀಡಾಗಿದ್ದು, ದೇಶದಲ್ಲಿ ಕಳೆದ 10 ವರ್ಷಗಳಲ್ಲಿ ಉಂಟಾದ ಬೆಳವಣಿಗೆಗಳ ಬಗ್ಗೆ ತಮಗೆ ಮಾಹಿತಿಯಿದೆ. ಬಡವರ, ಶ್ರಮಿಕರ, ಮಹಿಳೆಯರ, ನಿರುದ್ಯೋಗಿಗಳ ಬದುಕನ್ನು ಸುಧಾರಿಸುವುದಕ್ಕೋಸ್ಕರ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕಿದೆ. ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಅತ್ಯಧಿಕ ಮತಗಳನ್ನು ನೀಡಿ ಆಶೀರ್ವದಿಸಿ ಎಂದು ವಿನಂತಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಕಾಂಗ್ರೆಸ್ ಸರಕಾರದಲ್ಲಿ ನಿಮ್ಮ ಬದುಕು ಸುಧಾರಣೆಯಾಗಿದೆ ಎಂಬುದು ಈಗಾಗಲೇ ನಿಮ್ಮ ಗಮನಕ್ಕೆ ಬಂದಿದೆ. ಆದ್ದರಿಂದ ತಾವೆಲ್ಲರೂ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಮತ ನೀಡಿ ಆಶೀರ್ವದಿಸಬೇಕು ಎಂದರು.

ಮುಖಂಡ ಪಿ.ವೈ. ಮಕ್ಕನ್ನವರ ಅಧ್ಯಕ್ಷತೆ ವಹಿಸಿದ್ದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮುಖಂಡರಾದ ಶಿವಣ್ಣ ಸಿಂಗಟಾಲಕೇರಿ, ನಗರಸಭೆ ನಾಮನಿರ್ದೇಶಿತ ಸದಸ್ಯ ಶರಣಪ್ಪ ಗೊಳಗೊಳಕಿ, ನಗರಾಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯ ಬಿ.ಎನ್. ಯರನಾಳ, ಕೇಶವರಾವ್ ಕೊಳ್ಳಿ, ಸಿ.ಕೆ. ಮಾಳಶೆಟ್ರ, ಲಕ್ಷ್ಮೀಬಾಯಿ ಕಟ್ಟಿಮನಿ, ಅನಂತ ಭಟ್, ಎಂ.ಡಿ. ಸವದತ್ತಿ, ಶಂಕರ ಹಾನಗಲ್ ಸೇರಿ ಹಲವರು ಇದ್ದರು.

## ಸಮಾವೇಶವನ್ನು ಯಶಸ್ವಿಗೊಳಿಸಿ

▶▶ಮೊದಲನೇ ಪುಟದಿಂದ

ರಾಜ್ಯದ ಪಂಚ ಗ್ಯಾರಂಟಿಗಳಲ್ಲೊಂದಾದ ಗೃಹಲಕ್ಷ್ಮೀ ಯೋಜನೆಗೆ ಪ್ರೇರಣೆ ಹಾಗೂ ಯೋಜನೆ ಅನುಷ್ಠಾನಕ್ಕೆ ಪ್ರೋತ್ಸಾಹ ನೀಡಿದ ಪ್ರಿಯಾಂಕಾ ಗಾಂಧಿ ಅವರು ಗದಗ ನಗರಕ್ಕೆ ಆಗಮಿಸುತ್ತಿರುವುರಿಂದ ಗೃಹಲಕ್ಷ್ಮೀ ಯೋಜನೆಯ ಎಲ್ಲ ಫಲಾನುಭವಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಅಲ್ಲದೇ, ಕಾಂಗ್ರೆಸ್ ಪಕ್ಷದ ಶಕ್ತಿ ಪ್ರದರ್ಶನದ ಮೂಲಕ ರಾಜ್ಯದ ಜನತೆಯನ್ನು ಕಾಂಗ್ರೆಸ್‌ನತ್ತ ಮುಖ ಮಾಡುವಂತೆ ಮಾಡಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗ್ರಾಮೀಣ ಘಟಕದ ಅಧ್ಯಕ್ಷ ಬಸವರಾಜ ಸುಂಕಾಪುರ, ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ನಗರಸಭೆ ಮಾಜಿ ಅಧ್ಯಕ್ಷ ಶ್ರೀನಿವಾಸ ಹುಯಿಲಗೋಳ, ಮುಖಂಡರಾದ ಜೂನಸಾಬ್ ನಮಾಜಿ, ಎಸ್.ಎನ್. ಬಳ್ಳಾರಿ, ರವಿ ಮೂಲಿಮನಿ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಕಾಂಗ್ರೆಸ್ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು ಸಭೆಯಲ್ಲಿದ್ದರು.

### ಮಂತ್ರಿಗಳೇ ನಿಮ್ಮ ಒಂದು ವರ್ಷದ ಸಾಧನೆ ಏನು?: ಬಸವರಾಜ ಬೊಮ್ಮಾಯಿ ಪ್ರಶ್ನೆ

# ಅನ್ನ, ನೀರಿಗೂ ಗತಿ ಇಲ್ಲದ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಹಾವೇರಿ



ಮಂತ್ರಿಗಳೆ ನಿಮ್ಮ ಒಂದು ವರ್ಷದ ಸಾಧನೆ ಏನು, ರಾಜ್ಯ ಸರ್ಕಾರದ ಖಜಾನೆಯಿಂದ ಎಷ್ಟು ರೂಪಾಯಿ ಬರ ಪರಿಹಾರ ಕೊಟ್ಟಿದ್ದೀರಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದ್ದಾರೆ.

ಅವರು ಹಾವೇರಿ ತಾಲೂಕಿನ ಯಲಗಚ್ಚ, ಕೋಣನತಂಬಿಗಿ, ಹಂದಿಗನೂರು, ಹೊಸ ಕಿತ್ತೂರ, ಹಲಗಿ, ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು.

ರಾಜ್ಯದಲ್ಲಿ ಇಷ್ಟು ದೊಡ್ಡ ಪ್ರಮಾಣದ ಬರ ಬಿದ್ದಿದ್ದು, ಈ ಸರ್ಕಾರ ರೈತರಿಗೆ ತನ್ನ ಖಜಾನೆಯಿಂದ ನಯಾಪೈಸೆ ನೀಡದೆ ಕೇಂದ್ರ ಸರ್ಕಾರದ ಕಡೆಗೆ ಬೆರಳು ಮಾಡಿ ತೋರಿಸುತ್ತದೆ. ಇದೊಂದು ಕೂಳು ನೀರಿಲ್ಲದ ದರಿದ್ರ ಸರ್ಕಾರ ಎಂದು ವಾಗ್ದಾಳಿ ನಡೆಸಿದರು.

> ಇದು ಮಕ್ಕಳ ಭವಿಷ್ಯ ಬರೆಯುವ ಚುನಾವಣೆ ಮೋದಿಯರನ್ನು ಮೂರನೇ ಬಾರಿ ಪಿಎಂ ಮಾಡಲು ನನ್ನನ್ನು ಗೆಲ್ಲಿಸಲು ತೀರ್ಮಾನಿಸಿದ್ದಿರಿ. ನನ್ನ ಕ್ಷೇತ್ರದಲ್ಲಿ 11 ಲಕ್ಷ ಮತದಾರರಿಗೆ ಕೇಂದ್ರದ ಯೋಜನೆಗಳು ತಲುಪಿವೆ. ಪ್ರಧಾನಿ ಮೋದಿಯವರು ಅಸಾಧ್ಯವನ್ನು ಸಾಧ್ಯ ಮಾಡಿದ್ದಾರೆ. ಮನೆ ಮನೆಗೆ ನೀರು ತರುವುದು ಕಷ್ಟ ಅಂತ ಹೇಳಿದ್ದರು. ಮೋದಿಯವರು ನಾಲ್ಕು ವರ್ಷದ ಹಿಂದೆ ಕೆಂಪು ಕೋಟೆಯ ಮೇಲೆ ನಿಂತು ಮನೆ ಮನೆಗಿ ನೀರು ತಲುಪಿಸುವ ಘೋಷಣೆ ಮಾಡಿದರು. ನನ್ನ ಅವಧಿಯಲ್ಲಿ ರಾಜ್ಯದಲ್ಲಿ 30 ಲಕ್ಷ ಮನೆಗಳಿಗೆ ನಲ್ಲಿ ನೀರು ತಲುಪಿಸಿದ್ದೇವೆ. ಮೋದಿಯವರು ಹತ್ತು ವರ್ಷದಲ್ಲಿ 25 ಕೊಟಿ ಬಡವರನ್ನು ಬಡತದಿಂದ ಮೇಲೆ ತಂದಿದ್ದಾರೆ ಎಂದು ಬಸವರಾಜ್ ಬೊಮ್ಮಾಯಿ ಹೇಳಿದರು.

ಕಳೆದ ಹತ್ತು ತಿಂಗಳಿಂದ ರಾಜ್ಯದಲ್ಲಿ ಒಂದೇ ಒಂದು ಅಭಿವೃದ್ಧಿ ಕೆಲಸ ನಡೆದಿಲ್ಲ. ಅಭಿವೃದ್ಧಿ ಮಾಡುವ ಉದ್ದೇಶ ಇವರಿಗಿಲ್ಲ. ಕೇಂದ್ರ ಸರ್ಕಾರ ಪಿಎಂ ಕಿಸಾನ್ ಯೋಜನೆಗೆ ರಾಜ್ಯ ಸರ್ಕಾರದಿಂದ ಕೊಡುತ್ತಿದ್ದ 4 ಸಾವಿರ ರೂ ಸ್ಥಗಿತಗೊಳಿಸಿದ್ದಾರೆ. ರೈತರ ಮಕ್ಕಳಿಗೆ ವಿದ್ಯಾನಿಧಿ ನಿಲ್ಲಿಸಿದರು. ಯಶಸ್ವಿನಿ ನಿಲ್ಲಿಸಿದರು. ಇವರಿಗೆ ರೈತರೆಂದರೆ ಅಲರ್ಜಿ, ಈ ರೈತ ವಿರೋಧಿ ಸರ್ಕಾರವನ್ನು ತೊಲಗಿಸಬೇಕು ಎಂದು ಹೇಳಿದರು.

ಮಂತ್ರಿಗಳು ಕಳೆದ ಒಂದು ವರ್ಷದಲ್ಲಿ ನಿಮ್ಮ ಇಲಾಖೆಗಳಲ್ಲಿ ಎಷ್ಟು ಕೆಲಸ ಮಾಡಿದ್ದೀರಿ ಲೆಕ್ಕ ಕೊಡಿ, ಮಕ್ಕಳ ಹಾಸ್ಟೇಲ್ ಫೀ ಕೊಟ್ಟಿಲ್ಲ, ಕುಡಿಯುವ ನೀರಿಗೆ ಒಂದು ಬೋರ್ ವೆಲ್ ಕೊಟ್ಟಿಲ್ಲ. ರೈತರ ಹಾಲಿನ ಬಾಕಿ ಕೊಟ್ಟಿಲ್ಲ. ಈ ಸರ್ಕಾರ ಇದ್ದೂ ಸತ್ತಂತೆ ಆಗಿದೆ ಎಂದರು.

ಹಾನಗಲ್ ನಲ್ಲಿ ಅಲ್ಪಸಂಖ್ಯಾತ ಮಹಿಳೆಯ ಮೇಲೆ ಅತ್ಯಾಚಾರ ಮಾಡಿದದವರನ್ನು ರಕ್ಷಣೆ ಮಾಡುತ್ತಿದ್ದಾರೆ. ಹುಬ್ಬಳ್ಳಿಯಲ್ಲಿ ನೇಹಾ ಹಿರೇಮಠ ನನ್ನು ಬರ್ಬರವಾಗಿ ಕೊಲೆ ಮಾಡಿದ್ದಾನೆ. ಈ ಸರ್ಕಾರದಲ್ಲಿ ಹೆಣ್ಣುಮಕ್ಕಳು ಸುರಕ್ಷಿತವಾಗಿಲ್ಲ. ದಲಿತರ ವಿಚಾರದಲ್ಲಿಯೂ ಈ ಸರ್ಕಾರ ನಿರ್ಲಕ್ಷ್ಯ ಧೋರಣೆ ತೋರಿದೆ. ಎಸ್ಸಿ ಪಿ ಟಿಎಸ್ ಪಿ ಹಣವನ್ನು ಗ್ಯಾರಂಟಿಗಳಿಗೆ ಕೊಟ್ಟಿದ್ದಾರೆ. ದಲಿತ ವಿರೋಧಿ ಸರ್ಕಾರ ಎಂದು ಆರೋಪಿಸಿದರು.

ಪ್ರಧಾನಿ ಮೋದಿಯವರು ಕೊಟ್ಟ ಅಕ್ಕಿಯನ್ನು ತಮ್ಮದೆಂದು ಹೇಳಿಕೊಳ್ಳುತ್ತಿದ್ದಾರೆ. 200 ಯುನಿಟ್ ವಿದ್ಯುತ್ ಯಾರಿಗೂ ನೀಡಿಲ್ಲ. ಗೃಹಲಕ್ಷ್ಮೀ ಶೇ 30% ರಷ್ಟು ತಲುಪಿಲ್ಲ. ಯುವನಿಧಿ ಯಾರಿಗೂ ಬಂದಿಲ್ಲ. ಮತ್ತೆ ಸುಳ್ಳು ಗ್ಯಾರಂಟಿಗಳನ್ನು ಹೇಳುತ್ತ ಹೊರಟಿದ್ದಾರೆ. ಅವರ ಸುಳ್ಳುಗಳ ಬಗ್ಗೆ ಜನರಿಗೆ ಮನವರಿಕೆ ಮಾಡುವಂತೆ ಮನವಿ ಮಾಡಿದರು.

ಪ್ರಚಾರ ಸಂದರ್ಭದಲ್ಲಿ ಮಾಜಿ ಶಾಸಕ ಶಿವರಾಜ ಸಜ್ಜನ ಹಾಜರಿದ್ದರು.

## ಪ್ರಜ್ವಲ್ ರೇವಣ್ಣ ವಿರುದ್ಧ ಲುಕ್‌ಔಟ್ ನೋಟಿಸ್ ಹೊರಡಿಸಿದ ಎಸ್‌ಐಟಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ದೇಶದಾದ್ಯಂತ ಭಾರೀ ಸದ್ದು ಮಾಡಿದ್ದ ಹಾಸನದ ಪೆನ್‌ಡ್ರೈವ್ ವೈರಲ್, ಸಂಸದ ಪ್ರಜ್ವಲ್ ರೇವಣ್ಣನ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆ ನಡೆದಿದ್ದು, ಇದೀಗ ಪ್ರಜ್ವಲ್ ರೇವಣ್ಣ ವಿರುದ್ಧ ಎಸ್‌ಐಟಿ ಅಧಿಕಾರಿಗಳು ಲುಕ್‌ಔಟ್ ನೋಟಿಸ್ ಹೊರಡಿಸಿದ್ದಾರೆ.

ಹೊಳೆನರಸೀಪುರ ಟೌನ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಹಾಗೂ ಅವರ ಮಗ ಸಂಸದ ಪ್ರಜ್ವಲ್ ರೇವಣ್ಣ ಆರೋಪಿಗಳಾಗಿದ್ದಾರೆ. ಪ್ರಕರಣ ದಾಖಲಾಗುವ ಮುನ್ನವೇ ಪ್ರಜ್ವಲ್ ದೇಶದಿಂದ ಪರಾರಿಯಾಗಿದ್ದರು.

ಎಸ್‌ಐಟಿ ಅಧಿಕಾರಿಗಳು ಎಚ್.ಡಿ. ರೇವಣ್ಣ ಮತ್ತು ಪ್ರಜ್ವಲ್ ರೇವಣ್ಣಗೆ ತನಿಖೆಗೆ ಹಾಜರಾಗುವಂತೆ ನೊಟೀಸ್ ಜಾರಿ ಮಾಡಿತ್ತು. 24 ಗಂಟೆಗಳ ಒಳಗೆ ಎಸ್‌ಐಟಿ ಮುಂದೆ ಹಾಜರಾಗುವಂತೆ ಸೂಚಿಸಿತ್ತು. ಆದರೆ ವಿಚಾರಣೆಗೆ ಹಾಜರಾಗಲು ನಾನು  ಗಳೂರಿನಲ್ಲಿ ಇಲ್ಲದ ಕಾರಣ, ಕಾಲಾವಕಾಶ ಕೋರಿ ನಾನು ನನ್ನ ವಕೀಲರ ಮೂಲಕ ಮನವಿ ಸಲ್ಲಿಸಿದ್ದೇನೆ ಎಂದು ಪ್ರಜ್ವಲ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ನಿನ್ನೆ ಪೋಸ್ಟ್ ಮಾಡಿದ್ದರು.

ಪ್ರಜ್ವಲ್ ವಿದೇಶದಲ್ಲಿರುವ ಬಗ್ಗೆ ಎಸ್‌ಐಟಿ ಅಧಿಕಾರಿಗಳು ಈಗ ಮಾಹಿತಿ ಕಲೆ ಹಾಕಿದ್ದಾರೆ. ಪ್ರಜ್ವಲ್ ಪತ್ತೆಗಾಗಿ ಲುಕ್ ಔಟ್ ನೋಟಿಸ್ ಜಾರಿ ಮಾಡಿ, ವಿಮಾನ ನಿಲ್ದಾಣ ಅಧಿಕಾರಿಗಳು ಹಾಗೂ ಅಂತರಾಷ್ಟ್ರೀಯ ತನಿಖಾ ಸಂಸ್ಥೆಗಳಿಗೆ ರವಾನಿಸಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ.

ಲುಕ್‌ಔಟ್ ನೋಟಿಸ್ ಬಳಿಕವೂ ಪ್ರಜ್ವಲ್ ಪತ್ತೆಯಾಗದಿದ್ದರೆ, ಆತನ ಪತ್ತೆಗೆ ನ್ಯಾಯಾಲಯದಿಂದ ಜಾಮೀನು ರಹಿತ ವಾರೆಂಟ್ ಜಾರಿಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ಮಹಿಳೆಯರಿಗೆ ಕಿರುಕುಳ ನೀಡಿದ್ದಾರೆ ಎನ್ನಲಾದ ಸಾವಿರಾರು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದ್ದು, ಇದು ಪಕ್ಷ ಮತ್ತು ನಾಯಕತ್ವಕ್ಕೆ ಭಾರೀ ಮುಜುಗರ ಉಂಟು ಮಾಡಿತ್ತು. ಇದರ ಬೆನ್ನಲ್ಲಿ ಪ್ರಜ್ವಲ್ ರೇವಣ್ಣ ಅವರನ್ನು ಜೆಡಿಎಸ್ ಪಕ್ಷದಿಂದ ಅಮಾನತು ಮಾಡಲಾಗಿದೆ.

ಪ್ರಜ್ವಲ್ ರೇವಣ್ಣ ಅವರ ಲೈಂಗಿಕ ಹಗರಣದ ಸಂತ್ರಸ್ತೆಯೊಬ್ಬರು ಹೊಳೆನರಸೀಪುರ ಪೊಲೀಸ್ ಠಾಣೆಗೆ ಎಚ್‌ಡಿ ರೇವಣ್ಣ-ಪ್ರಜ್ವಲ್ ರೇವಣ್ಣ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಅಪ್ಪ-ಮಗನ ವಿರುದ್ಧ ಐಪಿಸಿ ಸೆಕ್ಷನ್‌ಗಳಾದ 354 (ಎ), 354 (ಡಿ) ಮತ್ತು 506, 509 ಅಡಿಯಲ್ಲಿ ದೂರು ದಾಖಲಿಸಲಾಗಿತ್ತು.

## ನಿಧನ ವಾರ್ತೆ

### ನೀಲಮ್ಮ ಈರಪ್ಪ ಮೆಣಸಿನಕಾಯಿ



ಲಕ್ಷ್ಮೇಶ್ವರ: ಪಟ್ಟಣದ ಸೊಪ್ಪಿನಕೇರಿ ಹಿರಿಯ ಓಣಿಯ ನಿವಾಸಿ, ಪುರಸಭೆ ಸದಸ್ಯೆ ನೀಲಮ್ಮ ಈರಪ್ಪ ಮೆಣಸಿನಕಾಯಿ(68) ಗುರುವಾರ ಸಂಜೆ ನಿಧನರಾದರು.

ಮೃತರಿಗೆ ಇಬ್ಬರು ಪುತ್ರರು ಸೇರಿ ಅಪಾರ ಬಂಧು-ಬಳಗವಿದೆ. ಶುಕ್ರವಾರ ಮಧ್ಯಾಹ್ನ 12ಕ್ಕೆ ಮೃತರ ಅಂತ್ಯಕ್ರಿಯೆ ನೆರವೇರಲಿದೆ.

## ಕಾಂಗ್ರೆಸ್‌ನಿಂದಲೇ ದೇಶದ ಪ್ರಗತಿ



■ ವಿಜಯಸಾಕ್ಷಿ ಸುದ್ದಿ, ರೋಣ

ಕಾಂಗ್ರೆಸ್‌ನಿಂದ ಮಾತ್ರ ದೇಶದ ಪ್ರಗತಿ ಎನ್ನುವುದನ್ನು ಮತದಾರರು ಮರೆಯಬಾರದು ಎಂದು ಮಾಜಿ ಸಚಿವ ಬಿ.ಆರ್ ಯಾವಗಲ್ಲ ಹೇಳಿದರು.

ಅವರು ತಾಲೂಕಿನ ಹುಲ್ಲೂರ ಗ್ರಾಮದಲ್ಲಿ ಬಾಗಲಕೋಟಿ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಪರವಾಗಿ ಮತಯಾಚಿಸಿ ಮಾತನಾಡಿದರು.

ರಾಜಕೀಯ ಪಕ್ಷಗಳಾಗಲಿ, ನಾಯಕರಾಗಲಿ ಜನರಲ್ಲಿ ಸಹೋದರತೆಯನ್ನು ಮೂಡಿಸಬೇಕೇ ಹೊರತು ದ್ವೇಷವನ್ನಲ್ಲ. ಇವತ್ತಿನ ದಿನಗಳಲ್ಲಿ ದ್ವೇಷ ಮನೋಭಾವನೆಯನ್ನು ಬಿತ್ತುವುದೇ ಉದ್ದೇಶವಾಗಿರುವುದು ವಿಪರ್ಯಾಸ. ಇದರಿಂದ ದೇಶದ ಪ್ರಗತಿ ಅಸಾಧ್ಯ. ದೇಶದ ಸಂವಿಧಾನ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳ್ಳಲು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದರು.

ಯುವ ಮುಖಂಡ ವಿವೇಕ ಯಾವಗಲ್ಲ ಮಾತನಾಡಿ, ರಾಜ್ಯದ ಜನತೆಯ ಆಶೀರ್ವಾದದಿಂದ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಐದು ಗ್ಯಾರಂಟಿಗಳನ್ನು ಜಾರಿಗೆ ತಂದು ಜನರಿಗೆ ತಲುಪಿಸಿದೆ. ಈಗ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಮಹಿಳೆಗೆ 1 ಲಕ್ಷ ಸೇರಿದಂತೆ ರೈತರ ಸಾಲ ಮನ್ನಾ ಮಾಡುವುದಾಗಿ ಘೋಷಿಸಿದ್ದು, ಮತದಾರರು ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲರನ್ನು ಗೆಲ್ಲಿಸುವ ಮೂಲಕ ಯೋಜನೆಗಳ ಲಾಭವನ್ನು ಪಡೆದುಕೊಳ್ಳಬೇಕು ಎಂದರು. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

**25ನೇ ವಾರ್ಡಿನಲ್ಲಿ ಮನೆ-ಮನೆ ಪ್ರಚಾರ ಕೈಗೊಂಡ ಅಶೋಕ ಮಂದಾಲಿ**

## ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದರೆ ದೇಶದ ಪ್ರತಿ ಬಡ ಕುಟುಂಬಕ್ಕೆ ವಾರ್ಷಿಕ 1 ಲಕ್ಷ ರೂ. ನೆರವು ಸಿಗಲಿದೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲ್ಲೂಕಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ಅವರು ನಗರದ 25ನೇ ವಾರ್ಡ್ ವ್ಯಾಪ್ತಿಯಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದ್ದೇವರಮಠ ಅವರ ಪರ ಮನೆ-ಮನೆಗೆ ತೆರಳಿ ಮತಯಾಚನೆ ಮಾಡಿ, ಕಾಂಗ್ರೆಸ್ ಪಕ್ಷದ ಭರವಸೆ, ಗ್ಯಾರಂಟಿ ಯೋಜನೆಗಳು, ಅನುಕೂಲಗಳ ಬಗ್ಗೆ ವಿವರಿಸಿದರು.

ಗಿಗ್ ಕೆಲಸಗಾರರಿಗೆ ಸಾಮಾಜಿಕ ಭದ್ರತೆ, ಕೇಂದ್ರ ಸರ್ಕಾರದ ಉದ್ಯೋಗಗಳಲ್ಲಿ ಶೇ. 50ರಷ್ಟು ಮಹಿಳಾ ಮೀಸಲಾತಿ, ಕೇಂದ್ರ ಸರ್ಕಾರದ ಅನುದಾನವನ್ನು ದುಪ್ಪಟ್ಟುಗೊಳಿಸುವ ಮೂಲಕ ಆಶಾ, ಅಂಗನವಾಡಿ, ಮತ್ತು ಬಿಸಿಯೂಟ ಕಾರ್ಯಕರ್ತೆಯರಿಗೆ ಹೆಚ್ಚಿನ ವೇತನ, ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳ ಸಂಖ್ಯೆ ದ್ವಿಗುಣ, ಸ್ವಾಮಿನಾಥನ್ ಆಯೋಗದ ಸೂತ್ರದ ಪ್ರಕಾರ ರೈತರಿಗೆ ಬೆಂಬಲ ಬೆಲೆ, (ಎಂಎಸ್‌ಪಿ), ಕೃಷಿ ಸಾಲ ಮನ್ನಾ ಗ್ಯಾರಂಟಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಶಾಶ್ವತ ಆಯೋಗವನ್ನು ರಚಿಸಲಾಗುವುದು.

ಸಾಮಾಜಿಕ ಮತ್ತು ಆರ್ಥಿಕ ಸಮಾನತೆಯನ್ನು ಖಚಿತಪಡಿಸಿಕೊಳ್ಳಲು ರಾಷ್ಟ್ರವ್ಯಾಪಿ ಜನಗಣತಿಯಲ್ಲಿ ಪ್ರತಿಯೊಬ್ಬ ವ್ಯಕ್ತಿ ಮತ್ತು ಪ್ರತಿ ಸಮುದಾಯವನ್ನು ಪರಿಗಣಿಸಲಾಗುವುದು. ಮೀಸಲಾತಿಯ ಮೇಲಿನ ಶೇ.50 ಮಿತಿಯನ್ನು ಸಾಂವಿಧಾನಿಕ ತಿದ್ದುಪಡಿಯ ಮೂಲಕ ತೆಗೆದುಹಾಕಲಾಗುತ್ತದೆ. ಹೀಗಾಗಿ, ಮಹಿಳೆಯರು, ಯುವಕರು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಮತ ನೀಡುವ ಮೂಲಕ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾದರೆ 30 ಲಕ್ಷ ಹೊಸ ಸರ್ಕಾರಿ ಉದ್ಯೋಗಗಳು, ಉದ್ಯೋಗಗಳ ಕ್ಯಾಲೆಂಡರ್ ಪ್ರಕಾರ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ. ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ಸಂಪೂರ್ಣವಾಗಿ ಕೊನೆಗೊಳಿಸಲು ಹೊಸ ಕಾನೂನುಗಳು ಜಾರಿಯಾಗಲಿವೆ ಎಂದು ಅಶೋಕ ಮಂದಾಲಿ ತಿಳಿಸಿದರು.

## ಚುನಾವಣೆ ಪ್ರಯುಕ್ತ ಹೆಚ್ಚುವರಿ ವಿಶೇಷ ಸಾರಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮೇ 7ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿರುವ ಪ್ರಯುಕ್ತ ಮತದಾನಕ್ಕಾಗಿ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ತೆರಳುವ ಸಾರ್ವಜನಿಕರಿಗೆ ಸಾರಿಗೆ ಸೇವೆಯಲ್ಲಿ ವ್ಯತ್ಯಯ ಉಂಟಾಗದಂತೆ ಅವಶ್ಯಕ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ವಾ.ಕ.ರ.ಸಾ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ, ಬಾಗಲಕೋಟೆ ವಿಭಾಗಗಳು ಮತ್ತು ಕ.ರಾ.ರ.ಸಾ ನಿಗಮದಿಂದ ಸುಮಾರು 400 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಮೇ 3ರಿಂದ 6ರವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈ ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

**ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಪ್ರಚಾರ**

# ಕಾಂಗ್ರೆಸ್ ಗೂಂಡಾಗಳನ್ನು ಪೋಷಿಸುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾಂಗ್ರೆಸ್ ಸರಕಾರ ಅಲ್ಪಸಂಖ್ಯಾತ ಸಮುದಾಯದ ಪರವಾಗಿರುವ ಸರಕಾರವಾಗಿದೆ. ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ, ಯಾದಗಿರಿಯ ದಲಿತ ಹೆಣ್ಣುಮಕ್ಕಳ ಮೇಲಿನ ದೌರ್ಜನ್ಯದ ಘಟನೆಗಳನ್ನು ನೋಡಿದರೆ ಕಾಂಗ್ರೆಸ್ ಗೂಂಡಾಗಳನ್ನು ಪೋಷಿಸುತ್ತಿರುವಂತಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಆರೋಪಿಸಿದರು.

ಬುಧವಾರ ಇಲ್ಲಿನ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕೇಂದ್ರದಲ್ಲಿ ಬಿಜೆಪಿ ಈ ಬಾರಿ ಅಧಿಕಾರಕ್ಕೆ ಬಂದರೆ ಧರ್ಮಾಧಾರಿತವಾಗಿರುವ ಮೀಸಲಾತಿಯನ್ನು ರದ್ದುಗೊಳಿಸಿ, ಅದನ್ನು ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡದವರಿಗೆ ಹಂಚಿಕೆ ಮಾಡಲಾಗುವುದು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಯಾವುದೇ ಕಾರಣಕ್ಕೂ ಸಂವಿಧಾನ ಬದಲಾವಣೆ ಮಾಡುವುದಿಲ್ಲ




ಎಂದಿದ್ದಾರೆ. ಆದರೂ ಕಾಂಗ್ರೆಸ್ಸಿಗರು ಮಾತ್ರ ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಿಸುತ್ತಾರೆ ಎಂದು ವದಂತಿ ಹರಿಬಿಟ್ಟಿದ್ದಾರೆ. ಸಂವಿಧಾನ ಶಿಲ್ಪಿ ಬಿ.ಆರ್. ಅಂಬೇಡ್ಕರ್ ಅವರು ನಿಧನರಾದಾಗ ಅವರ ಅಂತ್ಯಕ್ರಿಯೆಗೆ ಜಾಗ ನೀಡದವರು ಇಂದು ಸಂವಿಧಾನದ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕಾಂಗ್ರೆಸ್ ದೇಶದ ಪ್ರತಿಯೊಬ್ಬ ಮಹಿಳೆಗೂ 1 ಲಕ್ಷ ರೂ. ಕೊಡುವದಾಗಿ ವಾಗ್ದಾನ ಮಾಡಿದೆ. ದೇಶದಲ್ಲಿ 65 ಕೋಟಿ ಮಹಿಳೆಯರಿದ್ದು, ಒಟ್ಟು ಭರವಸೆ ಈಡೇರಿಸಲು 65 ಲಕ್ಷ ಕೋಟಿ ರೂ. ಹಣ ಬೇಕಾಗುತ್ತದೆ. ದೇಶದ ಬಜೆಟ್ 40 ಲಕ್ಷ ಕೋಟಿ ರೂ. ದಾಟಿಲ್ಲ. ಹೀಗಾಗಿ ಇನ್ನುಳಿದ ಹಣವನ್ನು ಕಾಂಗ್ರೆಸ್ ಯಾವುದಾದರೂ ರಾಜ್ಯವನ್ನು ಮಾರಿ ಕೊಡಬೇಕಾಗುತ್ತದೆ ಎಂದು ಟೀಕಿಸಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಮುಖಂಡರಾದ ಅನಿಲ ಮೆಣಸಿನಕಾಯಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಮೋಹನ ಮಾಳಶೆಟ್ಟಿ, ಎಂ.ಎಂ. ಹಿರೇಮಠ, ನಾಗರಾಜ ಕುಲಕರ್ಣಿ, ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

ನರೇಂದ್ರ ಮೋದಿ 14 ವರ್ಷ ಗುಜರಾತ್ ಮುಖ್ಯಮಂತ್ರಿಯಾಗಿ, 10 ವರ್ಷ ಪ್ರಧಾನಿಯಾಗಿ ಸಾಂವಿಧಾನಿಕ ಹುದ್ದೆಯಲ್ಲಿದ್ದರೂ ಕೇವಲ 2 ಕೋಟಿ ಆಸ್ತಿ ಹೊಂದಿದ್ದಾರೆ. ಆದರೆ ಡಿ.ಕೆ. ಶಿವಕುಮಾರ ಮತ್ತು ಸುರೇಶ ಸಹೋದರರು 20 ಸಾವಿರ ಕೋಟಿ ರೂ. ಆಸ್ತಿ ಮಾಡಿಕೊಂಡಿದ್ದಾರೆ. ರೌಡಿ ಕೋತ್ವಾಲನ ಶಿಷ್ಯ ಇಂದು ಪ್ರಧಾನಿ ನರೇಂದ್ರ ವಿರುದ್ಧ ಮಾತಾಡುತ್ತಿದ್ದಾರೆ. ನರೇಂದ್ರ ಮೋದಿ 3ನೇ ಬಾರಿ ಪ್ರಧಾನಿಯಾದರೆ ಕಾಂಗ್ರೆಸ್ ನಾಯಕರಿಗೆ ಚೊಂಬೇ ಗತಿ.

**– ಬಸನಗೌಡ ಪಾಟೀಲ ಯತ್ನಾಳ.**
ಶಾಸಕರು, ವಿಜಯಪುರ.

## ಕಾಂಗ್ರೆಸ್ ಗ್ಯಾರಂಟಿಗಳು ಬಡವರ ಆಶಾಕಿರಣ

■ ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದ ಪಂಚ ಗ್ಯಾರಂಟಿಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ಬಡಜನತೆಯ ಆರ್ಥಿಕ ಸ್ಥಿತಿಯನ್ನು ಮೇಲೆತ್ತುವ ರೀತಿಯಲ್ಲಿ ಕೆಲಸ ಮಾಡಿದ್ದೇವೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 12ನೇ ವಾರ್ಡಿನ ಡಾ. ಅನಂತ ಶಿವಪೂರ ನಿವಾಸದ ಆವರಣದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ನಡೆದ ಪ್ರಚಾರ ಸಭೆಯಲ್ಲಿ ಸಚಿವರು ಮಾತನಾಡಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ರಾಜ್ಯದಲ್ಲಿ, ದೇಶದಲ್ಲಿ ವಾತಾವರಣ ಬದಲಾಗಿದೆ. ದೇಶಕ್ಕೆ ಸವಾಲಾಗಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರ, ಬಡವರ, ದೀನದಲಿತರ ಆಶಾಕಿರಣಗಳಾಗಿವೆ ಎಂದು ಹೇಳಿದರು.

ನಾವು ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಇದು ಬಡವರಿಗೆ ಅತ್ಯಂತ ಮಹತ್ವದ ಚುನಾವಣೆಯಾಗಿದ್ದು, ಬಡವರು ಕಾಂಗ್ರೆಸ್‌ಗೆ ಆಶೀರ್ವಾದ ಮಾಡುವ ಮೂಲಕ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಡಾ. ಅನಂತ ಶಿವಪೂರ ಮಾತನಾಡಿದರು. ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡೇವರಮಠ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ನಗರಸಭೆ ಮಾಜಿ ಅಧ್ಯಕ್ಷ ಪೀರಸಾಬ್ ಕೌತಾಳ, ನಗರಸಭೆ ಮಾಜಿ ಸದಸ್ಯ ಮಂಜುನಾಥ ಪೂಜಾರ, ಗಣಾಚಾರಿ ಸೇರಿ ಹಲವರು ಇದ್ದರು.

## ನಿಮ್ಮ ಮನೆ ಮಗಳನ್ನು ಆಶೀರ್ವದಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ, ಸಂವಿಧಾನದ ಆಶಯಕ್ಕೆ ಬದ್ಧಳಾಗಿ, ನಿಮ್ಮ ಮನೆ ಮಗಳಾಗಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ತಮ್ಮೆಲ್ಲರ ಆಶೀರ್ವಾದ ನೀಡಿ ನನ್ನನ್ನು ಆಯ್ಕೆ ಮಾಡಿ ಎಂದು ಸಮಾಜ ಸೇವಕಿ ಸುನಂದಾ ಕರಿಯಪ್ಪ ಶಿರಹಟ್ಟಿ ಮನವಿ ಮಾಡಿದರು.

ಅವರು ಪಟ್ಟಣದಲ್ಲಿ ಗುರುವಾರ ಮನೆ ಮನೆಗೆ ಭೇಟಿ ನೀಡಿ ಮತಯಾಚನೆ ಮಾಡಿ ಮಾತನಾಡಿ, ಸುಮಾರು 15-20 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ಪತಿ ಕರಿಯಪ್ಪ ಶಿರಹಟ್ಟಿ ಅವರಿಗೆ ಬೆನ್ನೆಲುಬಾಗಿ ಈ ಭಾಗದಲ್ಲಿ ನಿರ್ಗತಿಕರು, ಬಿಕ್ಷುಕರ ಸೇವೆಯನ್ನು ಮಾಡಿಕೊಂಡು ಬರುವ ಮೂಲಕ ಸಮಾಜಕ್ಕೆ ಅಳಿಲು ಸೇವೆ ಸಲ್ಲಿಸುತ್ತಿದ್ದೇವೆ. ಸಮಾಜ ಸೇವೆಯ ಮೂಲಕ ಎಲ್ಲರೊಂದಿಗೆ ಗುರುತಿಸಿಕೊಂಡಿರುವ ನಾವು ಕ್ಷೇತ್ರದವರೇ ಆಗಿರುವದರಿಂದ ಲೋಕಸಭೆಗೆ ಸ್ಪರ್ಧಿಸುವ ಮೂಲಕ ಇನ್ನೂ ಹೆಚ್ಚಿನ ಸೇವೆಯನ್ನು ನೀಡುವ ಉದ್ದೇಶವನ್ನು ಹೊಂದಿದ್ದು, ಎಲ್ಲರೂ ಆಶೀರ್ವಾದ ಮಾಡಿ ಮತಗಳನ್ನು ನೀಡಲು ಮನವಿ ಮಾಡುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತ, ನಿರ್ಗತಿಕರು, ಭಿಕ್ಷುಕರ, ನೊಂದವರ ಸೇವೆಯ ಮೂಲಕ ಹೆಸರು ಮಾಡಿರುವ ಕರಿಯಪ್ಪ ಶಿರಹಟ್ಟಿ ಮತ್ತಿತರರಿದ್ದರು.

## ಬಸನಗೌಡ ಯತ್ನಾಳರಿಗೆ ಮುಖಂಡರಿಂದ ಸ್ವಾಗತ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಚುನಾವಣೆ ಪ್ರಚಾರಾರ್ಥವಾಗಿ ಗದಗ ಜಿಲ್ಲೆಗೆ ಆಗಮಿಸಿದ್ದ ಮಾಜಿ ಕೇಂದ್ರ ಸಚಿವ ಹಾಗೂ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಗುರುವಾರ ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಹಾಗೂ ಮುಖಂಡರು ಸ್ವಾಗತಿಸಿದರು.

ಹಿಂದೂ ಫೈರ್ ಬ್ರಾಂಡ್ ಎಂದೇ ಗುರುತಿಸಲ್ಪಟ್ಟಿರುವ ಯತ್ನಾಳ ಅವರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿಯ ನೂರಾರು ಕಾರ್ಯಕರ್ತರು ಜಮಾಯಿಸಿ ಘೋಷಣೆಗಳನ್ನು ಕೂಗಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ದೇಶಕ್ಕೆ ಮೋದಿಯಂತಹ ದಿಟ್ಟ ಆಡಳಿತಗಾರನ ಅವಶ್ಯಕತೆ ಇದ್ದು, ಮೂರನೇ ಬಾರಿ ಅವರು ದೇಶದ ಪ್ರಧಾನಿಯಾಗುವದನ್ನು ಯಾರೂ ತಪ್ಪಿಸಲಾರರು. ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಬಸವರಾಜ ಬೊಮ್ಮಾಯಿಯವರು ಸಹ ಆಯ್ಕೆಯಾಗುವದರಲ್ಲಿ ಸಂಶಯವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಹಿರಿಯ ಮುಖಂಡ ಬಸವರಾಜ ಪಲ್ಲೇದ, ಶಿರಹಟ್ಟಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಬಿ.ಎಸ್. ಪಾಟೀಲ, ಕುಬೇರಪ್ಪ ಮಹಾಂತಶೆಟ್ಟರ, ಸಿದ್ದನಗೌಡ ಬಳ್ಳೊಳ್ಳಿ, ಕೃಷ್ಣ ಬಿದರಳ್ಳಿ, ರಾಮು ಪೂಜಾರ, ಶಕ್ತಿ ಕತ್ತಿ, ಮಂಜುನಾಥ ಗೊರವರ, ಸೋಮೇಶ ಉಪನಾಳ, ಈರಣ್ಣ ಅಕ್ಕೂರ, ಲಾಲಪ್ಪ ಲಮಾಣಿ, ಬಸವರಾಜ ಚಕ್ರಸಾಲಿ, ನವೀನ ಬೆಳ್ಳಟ್ಟಿ, ಗಿರೀಶ ಚವರಡ್ಡಿ, ಪ್ರಕಾಶ ಮಾದನೂರ ಮುಂತಾದವರಿದ್ದರು.

## ಪೊಲೀಸ್ ಸಿಬ್ಬಂದಿಗಳಿಂದ ಪಥ ಸಂಚಲನ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮೇ 7ರಂದು ಜರಗುವ ಲೋಕಸಭೆ ಚುನಾವಣೆಯಲ್ಲಿ ಮತದಾರರು ಭಯಮುಕ್ತವಾಗಿ ಮತ ಚಲಾಯಿಸುವಂತೆ ಮಾಡಲು ಕೇರಳದ ರಿಸರ್ವ್ ಪೊಲೀಸ್ ಪಡೆಯ ಸಿಬ್ಬಂದಿಗಳು ಪಟ್ಟಣದಲ್ಲಿ ಪಥ ಸಂಚಲನ ನಡೆಸಿದರು.

ಮುಳಗುಂದ ಠಾಣಾ ಸಿಪಿಐ ಸಂಗಮೇಶ ಶಿವಯೋಗಿ ನೇತೃತ್ವದಲ್ಲಿ ಕೇರಳದ ರಿಸರ್ವ್ (ಸಿಐಎಸ್‌ಎಫ್) ಪೊಲೀಸ್ ಅಧಿಕಾರಿಗಳು ಹಾಗೂ ಮುಳಗುಂದ ಪೊಲೀಸ್ ಸಿಬ್ಬಂದಿಗಳ ತಂಡ ಪಥ ಸಂಚಲನದಲ್ಲಿ ಪಾಲ್ಗೊಂಡಿದ್ದರು.

ಮುಳಗುಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಶಿಸ್ತುಬದ್ಧರಾಗಿ ಕೈಯಲ್ಲಿ ಶಸ್ತ್ರಾಗಳನ್ನು ಹಿಡಿದು ಹೆಜ್ಜೆ ಹಾಕುತ್ತಿರುವ ಪೊಲೀಸ್ ಸಿಬ್ಬಂದಿಗಳನ್ನು ಸಾರ್ವಜನಿಕರು ಕುತೂಹಲದಿಂದ ವೀಕ್ಷಿಸಿದರು.

ಮೇ 7ರಂದು ಜರಗುವ ಚುನಾವಣೆಯಲ್ಲಿ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತಗಟ್ಟೆಗೆ ಬಂದು ತಮ್ಮ ಮತವನ್ನು ಚಲಾವಣೆ ಮಾಡಬೇಕು, ಸಾರ್ವಜನಿಕರ ರಕ್ಷಣೆಗೆ ನಾವಿದ್ದೇವೆ. ಚುನಾವಣೆಯಲ್ಲಿ ಶಾಂತಿ-ಸುವ್ಯವಸ್ಥೆಯ ಪಾಲನೆ ದೃಷ್ಟಿಯಿಂದ ಪೊಲೀಸ್ ಇಲಾಖೆ ಮುಳಗುಂದದಲ್ಲಿ ಬೀಡುಬಿಟ್ಟಿದ್ದು, ಸಾರ್ವಜನಿಕರಲ್ಲಿ ಭದ್ರತೆಯ ಭಾವನೆ ಮೂಡಿಸಲಾಗುತ್ತಿದೆ ಎಂದು ಮುಳಗುಂದ ಠಾಣಾ ಸಿಪಿಐ ಸಂಗಮೇಶ ಶಿವಯೋಗಿ ತೀಳಿಸಿದರು.

ಮುಳಗುಂದ ಪಟ್ಟಣದ ಚಿಂಚಲಿ ಕ್ರಾಸ್, ವಾಲಿ ಕ್ರಾಸ್, ಗಾಂಧಿ ಕಟ್ಟೆ, ಕಬ್ಬನಕಟ್ಟೆ, ಅಂಬೇಡ್ಕರ್ ನಗರ, ಶೇಖಿ ಓಣಿ, ಸಿದ್ದೇಶ್ವರ ಗುಡಿ, ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಮೂಲಕ ಪೊಲೀಸ್ ಠಾಣೆವರೆಗೂ ಪಥ ಸಂಚಲನ ಜರುಗಿತು.

## ಉಚಿತ ಕೌಶಲ್ಯ ಆಧಾರಿತ ತರಬೇತಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ಆರ್‌ಸೆಟಿ ತರಬೇತಿ ಸಂಸ್ಥೆಯಲ್ಲಿ 18ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ/ಯುವತಿಯರಿಗಾಗಿ ಬರುವ ಮೇ ತಿಂಗಳಿನ ಎರಡನೇ ವಾರದಲ್ಲಿ 30 ದಿನಗಳ ಗೃಹ ವಿದ್ಯುತ್ ಉಪಕರಣ ಸೇವಾ ಉದ್ಯಮಿ (ಹೌಸ್ ವೈರಿಂಗ್) ತರಬೇತಿ ಪ್ರಾರಂಭವಾಗಲಿದೆ.

ಅಭ್ಯರ್ಥಿಗಳು ತಮ್ಮ ಹೆಸರು ನೊಂದಾಯಿಸಲು ಮೇ 5 ಕೊನೆಯ ದಿನವಾಗಿದ್ದು, ಆಸಕ್ತರು-ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ.-9980510717, 948348549 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಬಿಜೆಪಿಯಿಂದ ರೋಡ್‌ಶೋ ಇಂದು

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಹೊಳೆಆಲೂರ ಗ್ರಾಮದಲ್ಲಿ ಮೇ 3ರಂದು ಬೆಳಿಗ್ಗೆ 9ರಿಂದ ಸಂಜೆ 4ರವರೆಗೆ ಬಾಗಲಕೋಟಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡರ ಪರವಾಗಿ ಶಾಸಕ ಸಿ.ಸಿ. ಪಾಟೀಲ ರೋಡ್ ಶೋ ನಡೆಸಲಿದ್ದಾರೆ.

ಗಾಡಗೋಳಿ ಕ್ರಾಸ್‌ನಲ್ಲಿ ನಡೆಯಲಿರುವ ಬಹಿರಂಗ ಸಭೆಯಲ್ಲಿ ಭಾಗವಹಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವ ಮೂಲಕ ಮತಯಾಚನೆ ಮಾಡಲಿದ್ದಾರೆ ಎಂದು ನರಗುಂದ ಬಿಜೆಪಿ ಮಂಡಲದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka